# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 277 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–05–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 277 | Title- Code: KARKAN 28269 | Chitradurga | Date: 25-05-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮತ ಎಣಿಕೆಗೆ ನಿಯೋಜಿತ ಏಜೆಂಟರು ಶಿಸ್ತು ಮತ್ತು ತಾಳ್ಮೆಯಿಂದ ವರ್ತಿಸಿ 2

ವಿಧಾನ ಪರಿಷತ್ ಚುನಾವಣೆ: ವೋಟರ್ ಸ್ಲಿಪ್ ವಿತರಣೆಗೆ ಡಿಸಿ ಸೂಚನೆ 3

ಭತ್ತ ಬೆಳೆಯುವ ರೈತ ಆತ್ಮಹತ್ಯೆಯತ್ತ, ಅಕ್ಕಿ ಮಾರುವ ವ್ಯಾಪಾರಿ ಅರಮನೆಯತ್ತ...... 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಚಿಕ್ಕಪುರ ವ್ಯಾಪ್ತಿಯಲ್ಲಿ ಚಿತ್ರದುರ್ಗ ವೈದ್ಯ ಕಾಲೇಜು ನಿರ್ಮಿಸಿ: ಡಿಸಿಗೆ ಐಎಂಎ ಮನವಿ

» ಚಿತ್ರದುರ್ಗ

ವೈದ್ಯಕೀಯ ವಿದ್ಯಾರ್ಥಿಗಳಿಗೆ ಸುಸಜ್ಜಿತ ಕಾಲೇಜು ಕಟ್ಟಡ, ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಹಾಸ್ಟೆಲ್, ಸಭಾಂಗಣ, ಕ್ರೀಡಾಂಗಣ ಮತ್ತು ಗ್ರಂಥಾಲಯ ನಿರ್ಮಾಣ ಮಾಡಬೇಕೆಂದು ಭಾರತೀಯ ವೈದ್ಯಕೀಯ ಸಂಘ ಜಿಲ್ಲಾಧಿಕಾರಿಗಳಿಗೆ ಶುಕ್ರವಾರ ಮನವಿ ಸಲ್ಲಿಸಿತು.

ಈಗಾಗಲೇ ಹಾಲಿ ಡಿ.ಪಿ.ಆರ್.ನಂತೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನೂತನ ವೈದ್ಯಕೀಯ ಕಾಲೇಜು ಕಟ್ಟಡವನ್ನು ಸುಸಜ್ಜಿತವಾಗಿರುವ 20 ಕಟ್ಟಡಗಳನ್ನು ಕೆಡವಿ, ಹೊಸ ವೈದ್ಯಕೀಯ ಕಾಲೇಜು ಆಸ್ಪತ್ರೆ ನಿರ್ಮಾಣ ಮಾಡಲು ಕೈಗೊಂಡಿರುತ್ತಾರೆ. ಸದರಿ ಆವರಣದಲ್ಲಿ ಎನ್.ಎಂ.ಸಿ. ಮಾರ್ಗಸೂಚಿ ಪ್ರಕಾರ ಸಭಾಂಗಣ, 24 ಗಂಟೆಗಳು ನಡೆಸುವ ಲೈಬ್ರರಿ ಮತ್ತು ಕ್ರೀಡಾಂಗಣದ ಸವಲತ್ತುಗಳು ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ವಿಶೇಷವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಚಾಲ್ತಿಯಲ್ಲಿರುವ ಡಿ.ಪಿ.ಆರ್. ಪ್ರಕಾರವೇ ನಿರ್ಮಿಸುತ್ತಿರುವ ಕಟ್ಟಡಗಳಿಗೆ ಎ.ಎನ್.ಎಂ ಶಾಲೆಯ 30 ವಿದ್ಯಾರ್ಥಿನಿಯರು, ಜಿ.ಎನ್.ಎಂ. ಶಾಲೆಯ 90 ವಿದ್ಯಾರ್ಥಿಗಳು, ಬಿ.ಎಸ್ಸಿ. ನರ್ಸಿಂಗ್‌ನ 240 ವಿದ್ಯರ್ಥಿಗಳು ಮತ್ತು ಪ್ಯಾರ ಮೆಡಿಕಲ್ ಕೋರ್ಸ್ 420 ವಿದ್ಯಾರ್ಥಿ (ಅರೆ ವೈದ್ಯಕೀಯ)ಗಳು ಸೇರಿ ಒಟ್ಟಾರೆ ಪ್ರತಿ ವರ್ಷ 780 ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ.



ಹಾಲಿ ಚಾಲ್ತಿಯಲ್ಲಿರುವ ಡಿ.ಪಿ.ಆರ್.ನಲ್ಲಿರುವಂತೆ ಹೊಸ ಕಟ್ಟಡಗಳು ನಿರ್ಮಾಣಗೊಂಡು ಸದರಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳೇ ಉಪಯೋಗಿಸಲಿ, ಇಲ್ಲಿಯವರೆಗೆ ಸದರಿಯವರಿಗೆ ಆಸ್ಪತ್ರೆ ಆವರಣದಲ್ಲಿ ಯಾವುದೇ ರೀತಿಯ ಕಾಲೇಜು ಕಟ್ಟಡ, ವಸತಿ ಸೌಲಭ್ಯಗಳು, ಗ್ರಂಥಾಲಯ ಮತ್ತು ಕ್ರೀಡಾಂಗಣ ಸೌಲತ್ತುಗಳು ಇರುವುದಿಲ್ಲ. ಸದರಿ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿದ್ಯರ್ಥಿಗಳಿಂದ ಹೊರ ಮತ್ತು ಒಳ ರೋಗಿಗಳಿಗೆ ಮತ್ತು ತುರ್ತು ಚಿಕಿತ್ಸೆಗಳಿಗೆ ಮೂಲ ಸೇವೆಗಳನ್ನು ನೀಡಲು ಆಸ್ಪತ್ರೆಯ ಆವರಣದಲ್ಲಿಯೇ ಇವರಿಗೆ ಮೂಲ ಸೌಕರ್ಯ ಅಂದರೆ ಕಾಲೇಜು ಕಟ್ಟಡ ಮತ್ತು ವಸತಿ ಸೌಕರ್ಯವು ಅತಿ ಅವಶ್ಯಕವಾಗಿದೆ.ಈಗ ಪ್ರತಿ ನಿತ್ಯ ಸುಮಾರು 1 ಸಾವಿರಕ್ಕಿಂತ ಹೆಚ್ಚಾಗಿ ಹೊರರೋಗಿಗಳು ಮತ್ತು ಒಳರೋಗಿಗಳು 500 ರಿಂದ 600 ರೋಗಿಗಳನ್ನು, ಸೇವೆಗಳು ದೊರೆಯುತ್ತಿವೆ ಇದರ ಜೊತೆಗೆ ರೋಗಿಗಳ ಜೊತೆಗೆ ಬರುವ ಸಹಾಯಕರು ಮತ್ತು ಸಂಬಂಧಿಗಳು 2000 ಸಂಖ್ಯೆ ಮೀರುತ್ತದೆ. ಒಟ್ಟಾಗಿ ಆಸ್ಪತ್ರೆ ಆವರಣದಲ್ಲಿ ಸಾರ್ವಜನಿಕರು ಮತ್ತು ವಾಹನ ದಟ್ಟಣೆ ಹಾಗೂ ವಾಹನಗಳ ಪಾರ್ಕಿಂಗ್ ಮಾಡಲು ಸಹ ಅಸಾಧ್ಯವಾಗಿರುತ್ತದೆ.ತುರ್ತಾಗಿ ಬರುವ ರೋಗಿಗಳಿಗೂ ಸಹ ಚಿಕಿತ್ಸೆ ನೀಡಲು ಸ್ಥಳಾವಕಾಶ ಜೊತೆಗೆ ಸೂಕ್ತ ವಾತಾವರಣ ಇರುವುದಿಲ್ಲ, ಇದೇ ಜಾಗದಲ್ಲಿ ಕಾಲೇಜು ಆಸ್ಪತ್ರೆ ನಿರ್ಮಾಣಗೊಂಡಲ್ಲಿ ಈಗಾಗಲೇ ತಿಳಿಸಿರುವಂತೆ ಹೊರರೋಗಿಗಳು, ಒಳ ರೊಗಿಗಳು, ಸಹಾಯಕರು, ಸಂಬಂಧಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ವೈದ್ಯಕೀಯ ವಿದ್ಯಾರ್ಥಿಗಳು, ಭೋಧಕ ವರ್ಗದವರು, ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಎಲ್ಲರೂ ಸೇರಿ ಒಟ್ಟು ಸಂಖ್ಯೆ ಸುಮಾರು 9000 ರಿಂದ 10,000 ಜನರು ಪ್ರತಿ ನಿತ್ಯ ಸೇರುತ್ತಾರೆ. ಇವರುಗಳ ಜೊತೆಗೆ ವಾಹನಗಳ ಓಡಾಟ ಮತ್ತು ಪಾರ್ಕಿಂಗ್ ವ್ಯವಸ್ಥೆ ದಟ್ಟಣೆಯಿಂದ ಕೂಡಿರುವ ವಾತಾವರಣ ನೋಡಲು ಊಹಿಸಲು ಆಗುವುದಿಲ್ಲ.

ಮೆಡಿಕಲ್ ಕಾಲೇಜಿಗೆ ಪ್ರತಿ ವರುಷ 150 ವಿದ್ಯಾರ್ಥಿಗಳು ಹೊಸದಾಗಿ 2023ರಲ್ಲಿಯೇ ಪ್ರವೇಶ ಪಡೆದು ಜಿಲ್ಲಾ ಆಸ್ಪತ್ರೆ ಆವರಣದ ಹೊರಗಡೆ ವ್ಯಾಸಂಗ ಮಾಡುತ್ತಿದ್ದಾರೆ. ಈಗಾಗಲೇ 2013–14ರಲ್ಲಿ ಹಿರೇಗುಂಟನೂರು ಹೋಬಳಿ, ಚಿಕ್ಕಪುರ ಗ್ರಾಮದ ಸರ್ವೆ ನಂ: 96ರಲ್ಲಿ 15 ಎಕರೆ 23 ಗುಂಟೆ ಮತ್ತು ಸರ್ವೆ ನಂ:101ರಲ್ಲಿ ದಿನಾಂಕ:12–05–2015 ರಲ್ಲಿಯೇ 14 ಎಕರೆ 17 ಗುಂಟೆ ಒಟ್ಟಾಗಿ 30 ಎಕರೆ ಪಹಣಿ ಪತ್ರಿಕೆ ಆಗಿರುತ್ತದೆ.

ಪುಟ 2

## ಫಾಸ್ಟ್ ನ್ಯೂಸ್

### ನಾಯಕನಹಟ್ಟಿ ಶ್ರೀತಿಪ್ಪೇರುದ್ರಸ್ವಾಮಿ ಹುಂಡಿಯಲ್ಲಿ 71.41 ಲಕ್ಷ ಹಣ ಸಂಗ್ರಹ



**ಚಳ್ಳಕೆರೆ:** ರಾಜ್ಯದ ಪ್ರಸಿದ್ದ ದೇವಸ್ಥಾನಗಳಲ್ಲಿ ಒಂದಾದ ಜಿಲ್ಲೆಯ ನಾಯಕನಹಟ್ಟಿಯ ಶ್ರೀಗುರುತಿಪ್ಪೇರುದ್ರಸ್ವಾಮಿಯ ರಥೋತ್ಸವ ಮಾರ್ಚ್ 26ರಂದು ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು. ಶ್ರೀಸ್ವಾಮಿಯ ಜಾತ್ರೆಯ ನಂತರ ದೇವಸ್ಥಾನ ಹುಂಡಿಹಣ ಏಣಿಕೆ ಕಾರ್ಯವನ್ನು ದೇವಸ್ಥಾನದ ಆಡಳಿತಾಧಿಕಾರಿ ಗಂಗಾಧರ, ತಹಶೀಲ್ದಾರ್ ರೇಹಾನ್‌ಪಾಷ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳ ಸಮಕ್ಷಮದಲ್ಲಿ ನಡೆಯಿತು. ಶುಕ್ರವಾರ ನಡೆದ ಹಣ ಏಣಿಕೆ ಕಾರ್ಯ ಬೆಳಗಿನಿಂದ ಸಂಜೆವರೆಗೂ ನಿರಂತರವಾಗಿ ನಡೆದಿದ್ದು, ಈ ಬಾರಿ ನಿರೀಕ್ಷೆಗೂ ಮೀರಿ ಹೆಚ್ಚಿನ ಕಾಣಿಕೆಯನ್ನು ಭಕ್ತರು ಶ್ರೀಸ್ವಾಮಿಯ ಹುಂಡಿಗೆ ಹಾಕುವ ಮೂಲಕ ತಮ್ಮ ಭಕ್ತಿಯನ್ನು ಮೆರೆದಿದ್ದಾರೆ. ಹುಂಡಿ ಏಣಿಕೆ ಕಾರ್ಯದ ಸಂದರ್ಭದಲ್ಲಿ ಹೊರಮಠದಲ್ಲಿ 1953575 ಮತ್ತು ಒಳಮಠದಲ್ಲಿ 5187750 ಒಟ್ಟು 7141325 ಸಂಗ್ರಹವಾಗಿದೆ. ಇದರ ಜೊತೆಯಲ್ಲಿ ಬೆಳ್ಳಿ, ಬಂಗಾರದ ವಸ್ತುಗಳನ್ನು ಸಹ ಸಂಗ್ರಹವಾಗಿವೆ.

### ಚಿತ್ರದುರ್ಗ ನಗಕ್ಕಿಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಭೇಟಿ

**ಚಿತ್ರದುರ್ಗ:** ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮೇ.25 ರಂದು ಚಿತ್ರದುರ್ಗ ಜಿಲ್ಲೆಗೆ ಭೇಟಿ ನೀಡುತ್ತಿದ್ದಾರೆ. ಜಿಲ್ಲೆಗೆ ಆಗಮಿಸುತ್ತಿರುವ ಅವರು, ಆಗ್ನೇಯ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿ ಪರ ಮತಯಾಚನೆ ಮಾಡಲಿದ್ದಾರೆ. ಮೇ.25 ಶನಿವಾರ ಮಧ್ಯಾಹ್ನ 12 ಗಂಟೆಗೆ ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯಲ್ಲಿರುವ ವಿನಾಯಕ ಕಲ್ಯಾಣ ಮಂಟಪದಲ್ಲಿ ಸಭೆ ಆಯೋಜಿಸಲಾಗಿದೆ. ಮಾಜಿ ಸಚಿವರಾದ ಗೋವಿಂದ ಕಾರಜೋಳ, ಶಾಸಕರಾದ ಎಂ ಚಂದ್ರಪ್ಪ, ಮಾಜಿ ಶಾಸಕರಾದ ಜಿ ಹೆಚ್ ತಿಪ್ಪಾರೆಡ್ಡಿ ಪರಿಷತ್‌ನ ಶಾಸಕರು ಹಾಗೂ ಪರಿಷತ್ ಚುನಾವಣಾ ಉಸ್ತುವಾರಿ ಕೆಎಸ್ ನವೀನ್ ಮಾಜಿ ಶಾಸಕರಾದ ಎಸ್ ಕೆ ಬಸವರಾಜನ್ ಪರಿಷತ್ ಶಾಸಕರಾದ ಚಿದಾನಂದ ಗೌಡ, ಮಾಜಿ ಪರಿಷತ್ ಸದಸ್ಯ ಅರುಣ್ ಷಹಾಪುರ್, ಜಿಲ್ಲಾಧ್ಯಕ್ಷರಾದ ಎ ಮುರಳಿ ಸೇರಿದಂತೆ ಪಕ್ಷದ ಹಲವು ಮುಖಂಡರು ಸಭೆಯಲ್ಲಿ ಭಾಗವಹಿಸುವರು ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕ ಮತದಾರರು ಜಿಲ್ಲಾ ಪಧಾದಿಕಾರಿಗಳು ಮಂಡಲ ಅಧ್ಯಕ್ಷರು ಪ್ರಧಾನ ಕಾರ್ಯದರ್ಶಿಗಳು ಮುಖಂಡರು ಕಾರ್ಯಕರ್ತ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ಸಭೆಯಲ್ಲಿ ಭಾಗವಹಿಸಲು ಜಿಲ್ಲಾ ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್ ಮನವಿ ಮಾಡಿದ್ದಾರೆ

### ಬೆಸ್ಕಾಂ ಕಚೇರಿ ಸ್ಥಳಾಂತರ

» ಚಿತ್ರದುರ್ಗ

ನಗರದ ಐಶ್ವರ್ಯ ಪೋರ್ಟ್ ಮುಂದಿನ ಹಳೇ ಬೆವಿಕಂ ಕಾಲೋನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಕಚೇರಿಯನ್ನು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಪಕ್ಕದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.

# ರೈತರ ಪರಿಹಾರದ ಹಣ ಸಾಲಕ್ಕೆ ಜಮಾ: ಬ್ಯಾಂಕ್ ಅಧಿಕಾರಿಗಳ ಕ್ರಮಕ್ಕೆ ರೈತ ಸಂಘ ಆಕ್ರೋಶ

» ಚಳ್ಳಕೆರೆ

ರೈತ ಸಂಘದ ನಿರಂತರ ಹೋರಾಟದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬೆಳೆವಿಮೆ, ಬೆಳೆನಷ್ಟ ಪರಿಹಾರವನ್ನು ರೈತರ ಖಾತೆಗಳಿಗೆ ನೇರವಾಗಿ ಜಮಮಾಡುವ ಮಾಡುವ ರೈತರ ನೆರವಿಗೆ ಬಂದಿದೆ. ಆದರೂ ಸಹ ರೈತ ಸಮುದಾಯ ಸಂಕಷ್ಟದಿಂದ ಪಾರಾಗಿಲ್ಲವೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ಅಸಮದಾನವನ್ನು ವ್ಯಕ್ತಪಡಿಸಿದರು.

ಅವರು, ಶುಕ್ರವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ತಾಲ್ಲೂಕು ರೈತ ಸಂಘ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ನಂತರ ತಹಶೀಲ್ದಾರ್‌ಗೆ ರೈತ ಸಂಘದಿಂದ ನಾಲ್ಕು ಪ್ರಮುಖ ಹಕ್ಕೋತ್ತಾಯಗಳ ಮನವಿಯನ್ನು ಸಲ್ಲಿಸಿ ಮಾತನಾಡಿದರು.

ಪುಟ 2



# ಆನ್‌ಲೈನ್ ಮೂಲಕ ವೈದ್ಯರೊಬ್ಬರ 7.40 ಲಕ್ಷ ಲಪಟಾಯಿಸಿದ ಕಳ್ಳರು

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ನಗರ ವ್ಯಾಪ್ತಿಯ ಬ್ಯಾಂಕ್ ಖಾತೆಗಳಲ್ಲಿ ಇರುವ ಹಣವನ್ನು ಚಾಣಾಕ್ಷತನದಿಂದ ದೋಚುವ ಪ್ರಕರಣಗಳು ಹೆಚ್ಚುತ್ತಿವೆ. ಇದರಿಂದ ಬ್ಯಾಂಕ್‌ನಲ್ಲಿದ್ದ ಹಣ ಕಳೆದುಕೊಂಡ ಹಲವಾರು ಜನರು ಗಾಬರಿಗೆ ಒಳಗಾಗಿದ್ದಾರೆ. ಕಳೆದ ತಿಂಗಳಷ್ಟೇ ಇಲ್ಲಿನ ಖ್ಯಾತ ವಕೀಲರೊಬ್ಬರ ಖಾತೆಗೆ ಕನ್ನಹಾಕಿದ ಕಳ್ಳರು 1.35 ಲಕ್ಷ ಹಣವನ್ನು ಲಪಟಾಯಿಸಿದ್ದರು. ಇದರ ಬೆನ್ನ ಹಿಂದೆಯೇ ಮತ್ತೊಮ್ಮೆ ತ್ಯಾಗರಾಜ ನಗರದ ನಿವಾಸಿ, ಮಕ್ಕಳ ತಜ್ಞ ಡಾ.ಟಿ.ಎಂ.ನಟರಾಜ್ ಎಂಬುವವರ ಕೆನರಾ ಬ್ಯಾಂಕ್‌ನ ಉಳಿತಾಯ ಖಾತೆಯಲ್ಲಿದ್ದ ಹಣವನ್ನು ಸಿಮ್ ಕಾರ್ಡ್ ಬ್ಲಾಕಾಗಿದ್ದು ಅದನ್ನು ಅಪ್ಡೇಟ್ ಮಾಡಬೇಕೆಂದು ಏ.20 ಸಂಜೆ ಇವರಿಗೆ ತಿಳಿಸಿದ ಕಳ್ಳರು ಏ.21ರಂದು ಇವರ ಖಾತೆಯಿಂದ ಸುಮಾರು 2.40 ಲಕ್ಷ, ಏ.22ರಂದು 5 ಲಕ್ಷ ಒಟ್ಟು 7.40 ಲಕ್ಷ ಹಣವನ್ನು ದೋಚಿದ್ದಾರೆ. ತಮ್ಮ ಬ್ಯಾಂಕ್ ಖಾತೆಯಿಂದ ಚಾಣಾಕ್ಷತದಿಂದ ಹಣ ದೋಚಿದ ಕಳ್ಳರನ್ನು ಪತ್ತೆಹಚ್ಚಿಕೊಡುವಂತೆ ಡಾ.ನಟರಾಜ್ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

## ಪ್ರಮುಖ ಸುದ್ದಿ

### ಜಿಲ್ಲಾಮಟ್ಟದ ಸಲಹಾ ಸಮಿತಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಆಹಾರ ಸುರಕ್ಷತೆ: ಶೇ.100ರಷ್ಟು ನೋಂದಣಿಗೆ ಸೂಚನೆ

» ಚಿತ್ರದುರ್ಗ

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ನಿಯಮ ಹಾಗೂ ನಿಬಂಧನೆಗಳ ಅನುಸಾರವಾಗಿ ಶಾಲೆ, ಅಂಗನವಾಡಿ ಕೇಂದ್ರಗಳು, ಮಹಿಳಾ ಸೇವಾ ಸಂಘಗಳು, ನ್ಯಾಯಬೆಲೆ ಅಂಗಡಿಗಳು, ಆಹಾರ ಪದಾರ್ಥಗಳ ವ್ಯವಹಾರ ನಡೆಸುವ ಔಷಧಿ ಅಂಗಡಿಗಳು, ವಸತಿ ನಿಲಯಗಳು ಆಹಾರ ಸುರಕ್ಷತೆ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದ್ದು, ಜೂನ್ ಮಾಹೆಯೊಳಗೆ ಶೇ.100ರಷ್ಟು ನೋಂದಣಿ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಕುರಿತು ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು ಸಂಬಂಧಪಟ್ಟ ಎಲ್ಲಾ ಇಲಾಖೆಗಳೊಂದಿಗೆ ಕೈಜೋಡಿಸಿಆಹಾರಸುರಕ್ಷತೆಕುರಿತುಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.



ಹೋಟೆಲ್, ಬೀದಿಬದಿಯ ಆಹಾರ ಪದಾರ್ಥಗಳ ಮಾರಾಟ ಮಾಡುವ ಸ್ಥಳಗಳಿಗೆ ನಿಯಮಿತವಾಗಿ ಭೇಟಿ ನೀಡಿ, ಗುಣಮಟ್ಟ ಹಾಗೂ ಸ್ವಚ್ಛತೆ ಕುರಿತು ತಪಾಸಣೆ ನಡೆಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಾರ್ವಜನಿಕರಿಗೆ ಗುಣಮಟ್ಟದ ಆಹಾರ ಹಾಗೂ ಸುರಕ್ಷತೆಯ ದೃಷ್ಟಿಯಿಂದ ಆಹಾರ ಪಧಾರ್ಥಗಳ ಸಂಗ್ರಹಣೆ, ಮಾರಾಟ, ತಯಾರಿಕೆಯ ಸಂದರ್ಭದಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ಮಾನದಂಡಗಳನ್ನು ಅನುಸರಿಸಬೇಕು. ಸಾರ್ವಜನಿಕರು ಹಾಗೂ ಸರ್ಕಾರಿ ಅಧಿಕಾರಿಗಳು ಸ್ಪಂದಿಸುವ ಮೂಲಕ ಕಾರ್ಯಕ್ರಮದಯಶಸ್ವಿಗೆಕೈಜೋಡಿಸಬೇಕು ಎಂದರು.

ಆಹಾರ ಸುರಕ್ಷತೆ ಅಂಕಿತ ಅಧಿಕಾರಿ ಡಾ.ಸಿ.ಎಲ್.ಫಾಲಾಕ್ಷ ಮಾತನಾಡಿ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006 ನಿಯಮ, ನಿಬಂಧನೆ 2011 ಆಗಸ್ಟ್ 5ರಂದು ದೇಶದಾದ್ಯಂತ ಜಾರಿಗೆ ಬಂದಿದೆ. ಆಹಾರ ಸುರಕ್ಷತೆ ಹಿನ್ನಲೆಯಲ್ಲಿ ಇಲಾಖೆವತಿಯಿಂದ ಪರವಾನಗಿ ಮತ್ತು ನೋಂದಣಿ ಕಾರ್ಯ ಮಾಡುತ್ತೇವೆ. ಆಹಾರ ಸುರಕ್ಷತೆ ನಿಯಮ ಉಲ್ಲಂಘಿಸಿದರೆ ನಿಯಮಾನುಸಾರ ದಂಡ ವಿಧಿಸಲಾಗುತ್ತದೆ. ಜಿಲ್ಲಾ ವ್ಯಾಪ್ತಿಯಲ್ಲಿನ ವಿವಿಧ ಸ್ಥಳಗಳಲ್ಲಿ ಆಹಾರ ಪದಾರ್ಥಗಳ ವ್ಯಾಪಾರಸ್ಥರಿಗೆ ಹಾಗೂ ಗ್ರಾಹಕರಿಗೆ ಆಹಾರ ಸುರಕ್ಷತೆ ಕುರಿತು ಮಾಹಿತಿ ನೀಡಿದೆ ಹಾಗೂ ಉದ್ದಿಮೆ ತಪಾಸಣೆ ನಡೆಸಿ, ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಆಹಾರ ಸೇವಿಸುವ ಮಕ್ಕಳ ಸುರಕ್ಷತೆ ಪ್ರಮುಖವಾದದು. ಮಧ್ಯಾಹ್ನದ ಬಿಸಿಯೂಟ ನೀಡುವ ಶಾಲೆಗಳು, ಅಂಗನವಾಗಿ, ವಿವಿಧ ಇಲಾಖೆಗಳ ವಸತಿ ನಿಲಯಗಳು, ಎಲ್ಲಾ ನ್ಯಾಯಬೆಲೆ ಅಂಗಡಿಗಳು,ಎಪಿಎಂಸಿ ಆವರಣದಲ್ಲಿರುವ ಎಲ್ಲಾ ತರಹದ ವ್ಯಾಪಾರಸ್ಥರು ಹಾಗೂ ದಲ್ಲಾಳಿಗಳು, ಆಹಾರ ಪದಾರ್ಥಗಳ ವ್ಯವಹಾರ ನಡೆಸುವ ಔಷಧಿ ಅಂಗಡಿಗಳು, ಬೀದಿ ಬದಿ ವ್ಯಾಪಾರಿಗಳು, ಕಡ್ಡಾಯವಾಗಿ ಆಹಾರ ಸುರಕ್ಷತೆಯ ನೋಂದಣಿ ಮಾಡಿಸಬೇಕು. ಜಿಲ್ಲೆಯಲ್ಲಿ 2225 ಶಾಲೆಗಳಲ್ಲಿ ಈಗಾಗಲೇ 1371 ಶಾಲೆಗಳು ನೋಂದಣಿ ಮಾಡಿಕೊಂಡಿದ್ದು, 1146 ಶಾಲೆಗಳು ನೋಂದಣಿ ಬಾಕಿ ಇದೆ. 2331 ಅಂಗನವಾಡಿ ಕೇಂದ್ರಗಳ ಪೈಕಿ 1367 ಅಂಗನವಾಡಿಗಳು ನೋಂದಣಿಯಾಗಿದ್ದು, 964 ಅಂಗನವಾಡಿಗಳು ಬಾಕಿ ಇವೆ. 607 ನ್ಯಾಯಬೆಲೆ ಅಂಗಡಿಗಳ ಪೈಕಿ 328 ಅಂಗನವಾಡಿಗಳು ನೊಂದಣಿಗೆ ಬಾಕಿ ಇವೆ. ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಂಬಂಧಪಟ್ಟ ಇಲಾಖೆಯವರು ತಮ್ಮ ಆಧಾರ್ ಕಾರ್ಡ್ ಹಾಗೂ ರೂ.100 ಶುಲ್ಕವನ್ನು ಪಾವತಿಸಿ ತಾಲ್ಲೂಕು ಆಹಾರ ಸುರಕ್ಷತಾಧಿಕಾರಿಗಳಿಂದ ಕಡ್ಡಾಯವಾಗಿ ಆಹಾರ ಸುರಕ್ಷತೆಯ ನೊಂದಣಿ ಮಾಡಿಸಬೇಕು ಎಂದು ಹೇಳಿದರು. ಮಕ್ಕಳಿಗೆ ಊಟ ತಯಾರಿಸುವ ಬಾಣಿಸಿಗರು ಹಾಗೂ ಬಡಿಸುವವರು ವೈದ್ಯಕೀಯ ಪ್ರಮಾಣ ಪತ್ರ ಪಡೆಯಬೇಕು. ನೀರಿನ ಪರೀಕ್ಷೆ, ಅಡುಗೆಯವರು, ಕೆಲಸಗಾರರಿಗೆ ಕೈಗವಚ, ತಲೆಗವಚ ಧರಿಸಬೇಕು. ಅಡುಗೆ ಸ್ಥಳ ಸ್ವಚ್ಛವಾಗಿರಬೇಕು ಎಂದು ಹೇಳಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕುಮಾರಸ್ವಾಮಿ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.





## ಫಾಸ್ಟ್ ನ್ಯೂಸ್

### ಚಿಕ್ಕಪುರ ವ್ಯಾಪ್ತಿಯಲ್ಲಿ ವೈದ್ಯ ಕಾಲೇಜು ನಿರ್ಮಿಸಿ

» ಮೊದಲ ಪುಟದಿಂದ

ಸರ್ಕಾರಿ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಹೊಸದಾಗಿ ವಿಶೇಷ ಡಿ.ಪಿ.ಆರ್ (ವಿವರವಾದ ಯೋಜನಾ ವರದಿ)ಯನ್ನು ಮುಂದಿನ ನೂರು ವರುಷಗಳಿಗೆ ದೂರದೃಷ್ಟಿಯಲ್ಲಿ ಚಿಂತನೆ ಮಾಡಿ ಸದರಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸುಸಜ್ಜಿತ ಕಾಲೇಜು ಕಟ್ಟಡ, ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಹಾಸ್ಟೇಲ್ ಸೌಲಭ್ಯಗಳು, ಸಭಾಂಗಣ, ಕ್ರೀಡಾಂಗಣ ಮತ್ತು ಗ್ರಂಥಾಲಯ ವ್ಯವಸ್ಥೆ ನಿರ್ಮಾಣ ಮಾಡಬೇಕಾಗಿದೆ. ಇದರ ಜೊತೆಗೆ ಬೋಧಕ ವರ್ಗದವರಿಗೂ ಸಹ ವಸತಿ ಸೌಲಭ್ಯವನ್ನು ಸಹ ನಿರ್ಮಾಣ ಮಾಡಿಕೊಡಬಹುದು.ಚಿತ್ರದುರ್ಗ ಜಿಲ್ಲೆಯಲ್ಲಿ ಶೇಕಡ 65% ರಷ್ಟು ಜನ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಕ್ಕೆ ಸೇರಿದ್ದಾರೆ, ಚಿತ್ರದುರ್ಗ ನಗರ ಕರ್ನಾಟಕ ರಾಜ್ಯದ ಮಧ್ಯಭಾಗದಲ್ಲಿ ಇರುವುದರಿಂದ 2 ರಾಷ್ಟ್ರೀಯ ಹೆದ್ದಾರಿಗಳು (ಎನ್.ಹೆಚ್-48 ಮತ್ತು ಎನ್.ಹೆಚ್.369) ಹಾದು ಹೋಗಿರುವುದರಿಂದ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸೂಪರ್ ಸ್ಪೆಷಾಲಿಟಿಗಳಾದ ಹೃದಯ, ಮೂತ್ರಪಿಂಡ, ನರರೋಗ, ಕ್ಯಾನ್ಸರ್ ರೋಗಗಳು ಮತ್ತು ಇತರೆ ರೋಗಗಳಿಗೂ ಸಹ ಆಸ್ಪತ್ರೆ ಸೌಲಭ್ಯಗಳನ್ನು ನೀಡಿದರೆ ಸಾರ್ವಜನಿಕರಿಗೆ ಅತ್ಯಂತ ಉಪಯೋಗವಾಗುತ್ತದೆ. ಖನಿಜ ಪುನಶ್ಚೇತನ ನಿಧಿಯಲ್ಲಿ ಇನ್ನೂ ಬಾಕಿ ರೂ. 2,000/- ಕೋಟಿ ಹಣ ಲಭ್ಯವಿರುತ್ತದೆ ಇದಲ್ಲದೇ ರಾಜ್ಯದ ಎಸ್.ಇ.ಪಿ/ ಎಸ್.ಟಿ.ಪಿ. ಯೋಜನೆಗಳಲ್ಲೂ ಲಭ್ಯವಿರುವ ಅನುದಾನವನ್ನು ಸಹ ಉಪಯೋಗಿಸಬಹುದು, ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಸದರಿ ಜಿಲ್ಲಾ ಖನಿಜ ನಿಧಿಯಿಂದ ರಾಜ್ಯ ಸರ್ಕಾರದ ಅನುದಾನ ನಿರೀಕ್ಷಣೆ ಮಾಡದೇ ವೈದ್ಯಕೀಯ ಕಾಲೇಜಿನ ಕಟ್ಟಡಕ್ಕೆ ಸದರಿ ನಿಧಿಯನ್ನು ಬಳಸಬಹುದು. ಈ ಮೇಲ್ಕಂಡ ಈ ಅಂಶಗಳನ್ನು ವಿಶೇಷವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಮನವಿ ಮಾಡಲಾಯಿತು. ಚಿತ್ರದುರ್ಗ ಶಾಖೆ ಅಧ್ಯಕ್ಷ ಡಾ.ಪಿ.ಟಿ.ವಿಜಯ ಕುಮರ್, ಕಾರ್ಯದರ್ಶಿ ಡಾ.ಕೆ.ಎಂ.ಬಸವರಾಜ್ ಉಪಸ್ಥಿತರಿದ್ದರು.

### ಬ್ಯಾಂಕ್ ಅಧಿಕಾರಿಗಳ ಕ್ರಮಕ್ಕೆ ಆಕ್ರೋಶ

» ಮೊದಲ ಪುಟದಿಂದ

ತಾಲ್ಲೂಕಿನ ಹಲವಾರು ಬ್ಯಾಂಕ್‌ಗಳಲ್ಲಿ ಸರ್ಕಾರದ ನೀಡಿದ ಪರಿಹಾರದ ಹಣವನ್ನು ಅವರ ಸಾಲಕ್ಕೆ ರೈತರನ್ನು ಕೇಳದೆ ಜಮಾ ಮಾಡಲಾಗುತ್ತಿದೆ. ಬ್ಯಾಂಕ್‌ನ ವ್ಯವಸ್ಥಾಪಕರು ಸರ್ಕಾರ ನಿಯಮಗಳನ್ನು ಪಾಲಿಸುತ್ತಿಲ್ಲ. ಇದರಿಂದ ರೈತರಿಗೆ ದೇವರ ವರಕೊಟ್ಟರೂ ಪೂಜಾರಿ ವರಕೊಡಲಿಲ್ಲವೆನ್ನುವಂತಾಗಿದೆ. ಜಿಲ್ಲಾಧಿಕಾರಿಗಳು ಮೌಖಿಕವಾಗಿ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದರೂ ಅದರ ಪಾಲನೆಯಾಗಿಲ್ಲ. ಆದ್ದರಿಂದ ತಾಲ್ಲೂಕು ಆಡಳಿತ ಈ ಬಗ್ಗೆ ಗಮನಹರಿಸಬೇಕು. ರೈತರು ಈಗಾಗಲೇ ಹಿಂಗಾರು ಹಂಗಾಮಿಗಾಗಿ ಕೃಷಿ ಚಟುವಟಿಕೆಯಲ್ಲಿ ತೊಡಗಿದ್ದು, ಎಲ್ಲಾ ರೀತಿಯ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಸಲಕರಣೆಗಳನ್ನು ಶೇ.50ರ ರಿಯಾಯ್ತಿಯಲ್ಲಿ ರೈತರಿಗೆ ನೀಡಬೇಕು. ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ಇದುವರೆಗೂ ದೊರಕದ ರೈತರನ್ನು ಪತ್ತೆಹಚ್ಚಿ ಕೂಡಲೇ ಅವರಿಗೆ ಪರಿಹಾರ ಕೊಡಿಸಬೇಕು, ಈ ಭಾಗದಲ್ಲಿ ಶೇಂಗಾ ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಹೆಚ್ಚು ಇಳುವರಿ ಬರುವಂತಹ ಶೇಂಗಾ ಬಿತ್ತನೆ ಬೀಜಗಳನ್ನು ಸರ್ಕಾರ ವಿತರಣೆ ಮಾಡಬೇಕು, ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಆಗಾಗಾ ಕೈಕೊಡುತ್ತಿದ್ದು ಕೃಷಿ ಪಂಪ್‌ಸೆಟ್‌ಗಳ ರೈತರಿಗೆ ತೊಂದರೆಯಾಗುತ್ತಿದೆ ಇದನ್ನು ಸರಿಪಡಿಸಬೇಕು ಎಂದರು. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ಬ್ಯಾಂಕ್ ಸಾಲಗಳಿಗೆ ರೈತರ ಹಣ ಜಮಾಕುರಿತು ಚರ್ಚಿಸುವ ಬಗ್ಗೆ ಕೂಡಲೇ ಬ್ಯಾಂಕ್ ಅಧಿಕಾರಿಗಳ ಸಭೆಯನ್ನು ಕರೆಯುವ ಭರವಸೆ ನೀಡಿದರು. ಸಂಘದ ತಾಲ್ಲೂಕು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ, ಪ್ರಧಾನಕಾರ್ಯದರ್ಶಿ ಆರ್.ಬಸವರಾಜು, ತಿಪ್ಪೇಸ್ವಾಮಿ, ಪ್ರಕಾಶ್, ಹಿರೇಹಳ್ಳಿ ಯರ್ರಿಸ್ವಾಮಿ, ಎನ್.ದೇವರಹಳ್ಳಿರಾಜಣ್ಣ, ಬಿ.ಜಿ.ತಿಪ್ಪೇಸ್ವಾಮಿ, ಕೆ.ಜಯಣ್ಣ, ವೀರೇಶ್, ಸಣ್ಣಪಾಲಯ್ಯ, ನಾಗರಾಜ, ನಿಂಗಪ್ಪ, ಬೊಮ್ಮಯ್ಯ, ಸಣ್ಣಪಾಲಯ್ಯ, ಜಯಮ್ಮ, ರತ್ನಮ್ಮ, ಓಬಮ್ಮ, ಮಂಜಮ್ಮ, ಓಬಕ್ಕ ಮುಂತಾದವರು ಉಪಸ್ಥಿತರಿದ್ದರು.

### ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

» ಚಿತ್ರದುರ್ಗ

ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ 2024ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭವಾಗಿದೆ. ಜೂನ್ 03 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಸರ್ಕಾರಿ ಮಹಿಳಾ ತರಬೇತಿ ಸಂಸ್ಥೆಗೆ ಪ್ರವೇಶ ಬಯಸುವ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಮತ್ತು ಅರ್ಹ ಆಸಕ್ತ ಅಭ್ಯರ್ಥಿಗಳು www.cite.karnataka.gov.in ತಂತ್ರಾಂಶದ ಮೂಲಕ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದು. ಈ ಸಂಸ್ಥೆಯು ಮಹಿಳಾ ಸಂಸ್ಥೆಯಾಗಿರುವುದರಿಂದ ಎಲ್ಲಾ ಸೀಟುಗಳು ಮಹಿಳೆಯರಿಗೆ ಮೀಸಲಾಗಿರುತ್ತವೆ. ಮಹಿಳೆಯರಿಗೆ ಹಂಚಿಕೆಯಾಗದೆ ಉಳಿದ ಸೀಟುಗಳನ್ನು ಪುರುಷರಿಗೆ ಹಂಚಿಕೆ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-234515 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಮತ ಎಣಿಕೆಗೆ ನಿಯೋಜಿತ ಏಜೆಂಟರು ಶಿಸ್ತು ಮತ್ತು ತಾಳ್ಮೆಯಿಂದ ವರ್ತಿಸಿ : ಟಿ.ವೆಂಕಟೇಶ್

» ಚಿತ್ರದುರ್ಗ

ಏಪ್ರಿಲ್ 26ರಂದು ನಡೆದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಯ ಮತಎಣಿಕೆಯು ಜೂನ್ 04ರಂದು ಬೆಳಿಗ್ಗೆ 7ರಿಂದ ನಗರದ ಬಿ.ಡಿ.ರಸ್ತೆಯ ಸರ್ಕಾರಿ ವಿಜ್ಞಾನ ಕಾಲೇಜಿನ ನೂತನ ಕಟ್ಟಡದಲ್ಲಿ ನಡೆಯಲಿದ್ದು, ಈ ಮತ ಎಣಿಕೆ ಕಾರ್ಯ ಸುಗಮವಾಗಿ ನಡೆಯಲು ನಿಯೋಜಿತ ರಾಜಕೀಯ ಪಕ್ಷಗಳ ಏಜೆಂಟರುಗಳು ಶಿಸ್ತು ಮತ್ತು ತಾಳ್ಮೆಯಿಂದ ವರ್ತಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಹೇಳಿದರು.





ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಮತಎಣಿಕೆ ಕುರಿತು ರಾಜಕೀಯ ಪಕ್ಷದ ಅಭ್ಯರ್ಥಿಗಳಿಗಾಗಿ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಮತಎಣಿಕೆ ನಡೆಯಲಿದೆ. ಉಮೇದುವಾರರು ಮತಎಣಿಕೆ ಕಾರ್ಯಕ್ಕೆ ಸುಮಾರು 125ಮಂದಿ ಏಜೆಂಟರನ್ನು ನೇಮಿಸಿಕೊಳ್ಳಲು ಅವಕಾಶವಿದ್ದು, ನಮೂನೆ-18ರಲ್ಲಿ ಅರ್ಹ ಪ್ರತಿನಿಧಿಗಳ ಹೆಸರು ವಿಳಾಸ ಮತ್ತು ಇತ್ತೀಚಿನ 02ಭಾವಚಿತ್ರಗಳನ್ನು ನೀಡಿ, ಗುರುತಿನಚೀಟಿಪಡೆದುಕೊಳ್ಳಬಹುದಾಗಿದೆ. ಪ್ರತಿ ತಾಲೂಕು ಮತಎಣಿಕೆಯ ಕಾರ್ಯಕ್ಕೆ ನಿಯೋಜಿತರಾಗುವ ಏಜೆಂಟರುಗಳಿಗೆ ವಿವಿಧ ಗುರುತಿಸಲಾದ ಬಣ್ಣದ ಕಾರ್ಡುಗಳನ್ನು ನೀಡಲಾಗುವುದು ಎಂದರು.

ಮತಎಣಿಕೆ ಕಾರ್ಯಕ್ಕೆ ನಿಯೋಜಿತ ಏಜೆಂಟರುಗಳು ಜಿಲ್ಲಾ ಚುನಾವಣಾ ಶಾಖೆಯಿಂದ ನೀಡಲಾಗುವ ಗುರುತಿನ ಚೀಟಿಯನ್ನು ತೋರಿಸಿ, ಎಣಿಕೆ ದಿನದಂದು ಸಕಾಲದಲ್ಲಿದ್ದು ಪ್ರವೇಶ ಪಡೆಯಬಹುದಾಗಿದೆ. ಏಜೆಂಟರುಗಳು ಪೆನ್ನು ಮತ್ತು ಬಿಳಿ ಹಾಳೆಯ ಹೊರತಾಗಿ ಮೊಬೈಲ್ ಸೇರಿದಂತೆ ಬೇರೆ ಯಾವುದೇ ರೀತಿಯ ವಿದ್ಯುನ್ಮಾನ ಯಂತ್ರಗಳು, ನೀರಿನ ಬಾಟಲಿ, ಕತ್ತರಿ, ಚಾಕು ಅಥವಾ ಇನ್ನಿತರ ಹರಿತವಾದ ವಸ್ತುಗಳು, ಲೈಟರ್, ಬೆಂಕಿಪೊಟ್ಟಣ ಮುಂತಾದವುಗಳು ಕೊಂಡೊಯ್ಯುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದರು.

ಏಜೆಂಟರು ತಮಗೆ ನಿಗಧಿಪಡಿಸಿದ ಟೇಬಲ್ ಮತ್ತು ಕ್ಷೇತ್ರಕ್ಕೆ ನಿಗಧಿಪಡಿಸಿರುವ ಕೌಂಟಿಂಗ್ ಕೊಠಡಿಯನ್ನು ಬಿಟ್ಟು ಬೇರೆ ಕಡೆಗೆ ಹೋಗುವುದನ್ನು ನಿಷೇಧಿಸಿದೆ. ನಿಯಮ ಪಾಲಿಸದಿರುವ ಏಜೆಂಟರನ್ನು ಯಾವುದೇ ಮುನ್ಸೂಚನೆ ನೀಡದೆ ಎಣಿಕೆ ಕೇಂದ್ರದಿಂದ ಹೊರಹಾಕಲಾಗುವುದು ಎಂದ ಅವರು ಎಣಿಕೆ ಕೊಠಡಿಯಲ್ಲಿ ಸುರಕ್ಷತಾ ದೃಷ್ಟಿಯಿಂದ ಹಾಕಲಾಗುವ ರಕ್ಷಣಾ ಗೋಡೆಯನ್ನು ದಾಟಲು ಅವಕಾಶವಿರುವುದಿಲ್ಲ.

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 14ಟೇಬಲ್‌ಗಳನ್ನು ನಿಗಧಿಪಡಿಸಲಾಗಿದೆ. ಅಂದು ಬೆಳಿಗ್ಗೆ 7.30ಕ್ಕೆ ಭದ್ರತಾ ಕೊಠಡಿಗಳನ್ನು ಏಕಕಾಲಕ್ಕೆ ತೆರೆಯಲಾಗುವುದು. ಬೆಳಿಗ್ಗೆ 8ರಿಂದ ಅಂಚೆ ಮತ ಎಣಿಕೆ ಮತ್ತು ವಿದ್ಯುನ್ಮಾನ ಮತಯಂತ್ರಗಳ ಎಣಿಕೆಯನ್ನು ಆರಂಭಿಸಲಾಗುವುದು. ನೆಲಮಹಡಿಯಲ್ಲಿ ಚಳ್ಳಕೆರೆ, ಹೊಸದುರ್ಗ ಮತ್ತು ಪಾವಗಡ ವಿಧಾನಸಭಾ ಕ್ಷೇತ್ರಗಳ ಎಣಿಕೆ, ಮೊದಲ ಮಹಡಿಯಲ್ಲಿ ಮೊಳಕಾಲ್ಮೂರು, ಹಿರಿಯೂರು ಮತ್ತು ಶಿರಾ ತಾಲೂಕುಗಳ ಮತಎಣಿಕೆ ಹಾಗೂ ಎರಡನೇ ಮಹಡಿಯಲ್ಲಿ ಚಿತ್ರದುರ್ಗ ಮತ್ತು ಹೊಳಲ್ಕೆರೆ ವಿಧಾನಸಭಾ ಕ್ಷೇತ್ರಗಳ ಮತಎಣಿಕೆ ಕಾರ್ಯ ನಡೆಯಲಿದೆ ಎಂದರು.

ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ 285ಮತಗಟ್ಟೆಗಳ ಎಣಿಕೆಯು 21ಸುತ್ತುಗಳಲ್ಲಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದ 260ಮತಗಟ್ಟೆಗಳ ಎಣಿಕೆಯು 19ಸುತ್ತುಗಳಲ್ಲಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ 288ಮತಗಟ್ಟೆಗಳ ಎಣಿಕೆಯು 21ಸುತ್ತುಗಳಲ್ಲಿ, ಹಿರಿಯೂರು ವಿಧಾನಸಭಾ ಕ್ಷೇತ್ರದ 287ಮತಗಟ್ಟೆಗಳ ಎಣಿಕೆಯು 21ಸುತ್ತುಗಳಲ್ಲಿ, ಹೊಸದುರ್ಗ ವಿಧಾನಸಭಾ ಕ್ಷೇತ್ರದ 242ಮತಗಟ್ಟೆಗಳ ಎಣಿಕೆಯು 18ಸುತ್ತುಗಳಲ್ಲಿ, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ 299ಮತಗಟ್ಟೆಗಳ ಎಣಿಕೆಯು 22ಸುತ್ತುಗಳಲ್ಲಿ, ಶಿರಾ ವಿಧಾನಸಭಾ ಕ್ಷೇತ್ರದ 267ಮತಗಟ್ಟೆಗಳ ಎಣಿಕೆಯು 20ಸುತ್ತುಗಳಲ್ಲಿ ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರದ 240ಮತಗಟ್ಟೆಗಳ ಎಣಿಕೆಯು 18ಸುತ್ತುಗಳಲ್ಲಿ ಪೂರ್ಣಗೊಳ್ಳಲಿದ್ದು, ತ್ವರಿತಗತಿಯಲ್ಲಿ ಫಲಿತಾಂಶ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಅಲ್ಲದೇ ಅಗತ್ಯ ಸಿಬ್ಬಂಧಿಯನ್ನು ನಿಯೋಜಿಸಲಾಗಿದೆ ಎಂದರು.ಸಭೆಯಲ್ಲಿ ಉಪಸ್ಥಿತರಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಅವರು ಮಾತನಾಡಿ, ಮತ ಎಣಿಕೆ ಕೇಂದ್ರದಲ್ಲಿ ಅನವಶ್ಯಕ ಚರ್ಚೆ, ಕ್ಷುಲ್ಲಕ ಕಾರಣಕ್ಕೆ ಗಲಾಟೆ ಮಾಡುವುದು, ಎಲ್ಲೆಂದರಲ್ಲಿ ಸುತ್ತಾಡುವುದು, ಗುಂಪು ಚರ್ಚೆ ಇವುಗಳನ್ನು ನಡೆಸಲು ಅವಕಾಶವಿರುವುದಿಲ್ಲ. ನಿಯೋಜಿತ ಏಜೆಂಟರು ತಮ್ಮ ಕೊಠಡಿಯನ್ನು ಬಿಟ್ಟು ಕೇಂದ್ರದಲ್ಲಿ ಸಂಚರಿಸಲು ಅವಕಾಶವಿರುವುದಿಲ್ಲ ಎಂದ ಅವರು, ನಿಯಮ ಪಾಲಿಸದಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಅನಿವಾರ್ಯವಾಗಲಿದೆ ಎಂದರು.ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಚುನಾವಣಾ ತರಬೇತುದಾರ ನಾಗಭೂಷಣ, ಜಿಲ್ಲಾ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್ ಸೇರಿದಂತೆ ಎಲ್ಲಾ ಉಮೇದುವಾರರ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಭಗವಂತನ ಅನುಗ್ರಹ, ಆಶೀರ್ವಾದಿಂದ ಮಾತ್ರ ಉತ್ತಮ ಬದುಕು ಸಾಧ್ಯ: ಕೆ.ಸಿ.ವೀರೇಂದ್ರ(ಪಪ್ಪಿ)



» ಚಳ್ಳಕೆರೆ

ನಗರದ ಶ್ರೀವೀರಭದ್ರಸ್ವಾಮಿ ದೇವಸ್ಥಾನದ ಕಾರ್ಯಕಾರಿ ಸಮಿತಿ ಮಂಡಳಿಯ ಸದಸ್ಯರು ಚಿತ್ರದುರ್ಗ ಕ್ಷೇತ್ರದ ಶಾಸಕ, ಕೆ.ಸಿ.ವೀರೇಂದ್ರ(ಪಪ್ಪಿ) ರವರನ್ನು ಅವರ ನಿವಾಸದಲ್ಲಿ ಸನ್ಮಾನಿಸಿದರು.

ಮೇ.22ರಂದು ನಡೆದ ಶ್ರೀವೀರಭದ್ರಸ್ವಾಮಿ ದೊಡ್ಡ ರಥೋತ್ಸವ ಸಂದರ್ಭದಲ್ಲಿ ಮುಕ್ತಿ ಬಾವುಟವನ್ನು ಮೂವತ್ತು ಲಕ್ಷಕ್ಕೆ ಹರಾಜಿನಲ್ಲಿ ಪಡೆದ ಹಿನ್ನೆಲೆಯಲ್ಲಿ ಅವರನ್ನು ದೇವಸ್ಥಾನ ಆಡಳಿತ ಮಂಡಳಿ ಗೌರವಿಸಿತು. ದೇವಸ್ಥಾನದ ಪ್ರತಿಯೊಂದು ಧಾರ್ಮಿಕ ಕಾರ್ಯಕ್ರಮಗಳಿಗೂ ಶಾಸಕ ಕೆ.ಸಿ. ವೀರೇಂದ್ರ(ಪಪ್ಪಿ)ಯವರು ಸಕರಾತ್ಮಕವಾಗಿ ಸ್ಪಂದಿಸುತ್ತಿದ್ದಾರೆಂದು ಧರ್ಮದರ್ಶಿ ಗೌಡ್ರರಾಮಣ್ಣ ಹಾಗೂ ಆಡಳಿತ ಮಂಡಳಿ ಸದಸ್ಯರು ಪ್ರಶಂಸಿಸಿದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ), ಇಂದು ನಾವೆಲ್ಲರೂ ಮಾನವೀಯತೆಯ ನೆಲೆಯಲ್ಲಿ ಉತ್ತಮ ಬದುಕು ಕಂಡುಕೊಂಡಿದ್ದೇವೆ. ನಾವೆಲ್ಲರೂ ಭಗವಂತನ ಇಚ್ಚೆಯಂತೆಯೇ ಜೀವನ ನಡೆಸುತ್ತಿದ್ದೇವೆ. ದೇವರ ಅನುಗ್ರಹ, ಆಶೀರ್ವಾದ ಬಲ ಸದಾ ನಮ್ಮನ್ನು ಕಾಯುತ್ತದೆ. ಯಾವ ವ್ಯಕ್ತಿ ಇಂತಹ ಪುಣ್ಯ ಕಾರ್ಯಗಳಿಗೆ ಸಹಕರಿಸುತ್ತಾನೋ ಅವನಿಗೆ ದೇವರು ಅಷ್ಟೇ ಸಹಾಯ ಮಾಡುತ್ತಾನೆಂಬುವುದು ನಮ್ಮ ಹಿರಿಯರ ನಂಬಿಕೆ. ನಾನು ಸಹ ನಮ್ಮ ಹಿರಿಯರ ನಿರ್ದೇಶನದಂತೆ ದೇವರ ಕಾರ್ಯಗಳಿಗೆ ನೆರವಾಗುತ್ತಿದ್ದೇನೆ. ಎಲ್ಲದಕ್ಕಿಂತ ದೊಡ್ಡದ್ದು ಶ್ರೀವೀರಭದ್ರಸ್ವಾಮಿಯ ಕೃಪೆ ಎಂದರು. ದೇವಸ್ಥಾನದ ಆಯಗಾರರಾದ ಗೌಡ್ರನಾಗಣ್ಣ, ಗೌಡ್ರಚಿಕ್ಕಣ್ಣ, ಪಿ.ತಿಪ್ಪೇಸ್ವಾಮಿ, ದಳವಾಯಿಮೂರ್ತಿ, ಸೂರಯ್ಯ, ಮಂಜು, ಟೈಲರ್‌ವೀರೇಶ್, ದೇವಿಪ್ರಸಾದ್,ನಾಗರಾಜು,ಪೂಜಾರಾದ ಶಾಂತಕುಮಾರ್, ಸುರೇಶ್ ಕುಮಾರ್ ಉಪಸ್ಥಿತರಿದ್ದರು.

### ಚಳ್ಳಕೆರೆ ನಗರಸಭೆ ಚರಂಡಿಗೆ ಆಕಸ್ಮಿಕವಾಗಿ ಬಿದ್ದ ಹೋರಿ ರಕ್ಷಣೆ



» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯಲ್ಲಿರುವ ದೊಡ್ಡಚರಂಡಿಯಲ್ಲಿ ಆಕಸ್ಮಿಕವಾಗಿ ಬಾರಿಗಾತ್ರದ ಹೋರಿಯೊಂದು ಮೇಯಲು ಹೋಗಿ ಚರಂಡಿಯಲ್ಲಿ ಬಿದ್ದು ಸಿಕ್ಕಿಕೊಂಡು ಮೇಲೆ ಬರಲು ಆಗದೆ ಒದ್ದಾಟ ನಡೆಸುತ್ತಿತ್ತು.



ಇತ್ತೀಚೆಗಷ್ಟೇ ನಗರಸಭೆ ಸಿಬ್ಬಂದಿ ಚರಂಡಿಯಲ್ಲಿನ ಹೂಳನ್ನು ತೆಗೆಯಲು ಅಲ್ಲಲ್ಲಿ ಮುಚ್ಚಿದ ಸ್ಲಾಬ್‌ಗಳನ್ನು ತೆಗೆದಿದ್ದಾರೆ. ಇದನ್ನು ಅರಿಯದ ಹೋರಿ ತಾನಾಗಿಯೇ ಅಲ್ಲಿಗೆ ಬಂದು ಬಿದಿದ್ದೆ. ಹೋರಿ ಬಿದ್ದು ಒದ್ದಾಡುವ ದೃಶ್ಯವನ್ನು ಕಂಡ ಅಲ್ಲಿನ ಕೆಲವು ಅಂಗಡಿ ಮಾಲೀಕರು, ಸಾರ್ವಜನಿಕರು ನಗರಸಭೆ ಮತ್ತು ಅಗ್ನಿಶಾಮಕ ಪಡೆಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಅಧಿಕಾರಿ ಜಯಣ್ಣ ಮತ್ತು ಸಿಬ್ಬಂದಿ ವರ್ಗ ಹೋರಿಯನ್ನು ಮೇಲೆತ್ತಲು ಬೆಲ್ಟ್‌ನ್ನು ಹೋರಿಗೆ ಕಟ್ಟಿ ನಿಧಾನವಾಗಿ ಚರಂಡಿಯಿಂದ ಜೆಸಿಬಿ ಸಹಾಯದಿಂದ ಮೇಲೆತ್ತಿದ್ದಾರೆ. ಚರಂಡಿ ಬಿದ್ದ ಹೋರಿಯನ್ನು ರಕ್ಷಿಸಿದ ಅಗ್ನಿಶಾಮಕ ಪಡೆಯ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.


## ಪ್ರಮುಖ ಸುದ್ದಿ

### ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ವಿಷಾದ

# ಇಂದಿನ ದಿನ ಮಾನಗಳಲ್ಲಿ ಗುರುವಿಗೆ ತಿರುಮಂತ್ರ ನೀಡುವ ಶಿಷ್ಯಂದಿರಿದ್ದಾರೆ

» ಹೊಸದುರ್ಗ

ಗುರು ಎಂದರೆ ಅದಕ್ಕೆ ನಾನಾ ಅರ್ಥಗಳಿವೆ, ಭಾರವಾದದ್ದು ತೂಕವಾದದ್ದು, ಯೋಗ್ಯವಾದದ್ದು ಅರಿವು ಮೂಡಿಸುವಂತಹದ್ದು ಈಗೆ ಅನೇಕ ಅರ್ಥಗಳನ್ನು ಕೊಡುತ್ತದೆ ವಿದ್ಯೆ ಕಲಿಸಿದ ಗುರುವಿಗೆ ಯಾರೂ ಸಹಾ ತಿರು ಮಂತ್ರ ಹಾಕಬಾರದು, ಆದರೆ ಇಂದಿನ ದಿನ ಮಾನಗಳಲ್ಲಿ ಗುರುವಿಗೆ ತಿರುಮಂತ್ರ ನೀಡುವ ಶಿಷ್ಯಂದಿರಿದ್ದಾರೆ ಎಂದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ವಿಷಾದ ವ್ಯಕ್ತಪಡಿಸಿದರು.





1987 ರಿಂದ 89 ನೇ ಸಾಲಿನ ಟಿ.ಸಿ.ಹೆಚ್. ಪ್ರಶಿಕ್ಷಣಾರ್ಥಿಗಳಿಂದ ಪಟ್ಟಣದ ಜಿ.ಎನ್. ಆರ್. ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದರು. ಯಾರೇ ಶಿಕ್ಷಕರಾಗಲಿ ಅವರ ಕಲಿಕೆಗೆ ಕೊನೆ ಇಲ್ಲಾ, ಶಿಕ್ಷಕರಾದಂತವರು ವಿದ್ಯಾರ್ಥಿಗಳಂತೆ ನಿರಂತರವಾಗಿ ಕಲಿಯುತ್ತಿರಬೇಕು ಮಕ್ಕಳಿಗೆ ಹೊಸ ಹೊಸ ಪ್ರಯೋಗಗಳನ್ನ ಪಾಠ ಪ್ರವಚವನಗಳ ಮೂಲಕ ಅವರಿಗೆ ಅರಿವು ಮೂಡಿಸಬೇಕಾಗುತ್ತದೆ, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದ ವೃತ್ತಿ ಅಂತಹ ಪವಿತ್ರ ವೃತ್ತಿಗೆ ಯಾರೂ ಸಹಾ ಕಪ್ಪು ಚುಕ್ಕೆ ಬರುವಂತೆ ನಡೆದು ಕೊಳ್ಳಬಾರದು ಎಂದು ಕಿವಿ ಮಾತು ಹೇಳಿದ ಅವರು ಯಾರೇ ಶಿಕ್ಷಕರಾಗಲಿ ಅವರ ತಿಳುವಳಿಕೆಗೆ, ಜ್ಞಾನಕ್ಕೆ ಅರಿವಿಗೆ ಕಲಿಕೆಗೆ ಕೋನೆ ಎಂಬುದಿಲ್ಲ, ನಿರಂತರವಾದ ಕಲಿಕೆಯೇ ಶಿಕ್ಷಕರ ವೃತ್ತಿ ಎಲ್ಲಾ ಶಿಕ್ಷಕರೂ ಕೂಡ ನಿರಂತರ ಕಲಿಕೆಯ ವಿದ್ಯಾರ್ಥಿಗಳು ಎಂದು ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲಾ ನಿವೃತ್ತ ನಿರ್ದೇಶಕರಾದ ಕೆ.ಪಿ.ಹನುಮಂತರಾಯಪ್ಪ ಮಾತನಾಡಿ ಮಕ್ಕಳಲ್ಲಿ ಮೌಲ್ಯಗಳನ್ನ ಬೆಳಸಿ ಪ್ರಾಮಾಣಿಕರನ್ನಾಗಿ ಮಾಡಿ, ಸಂಸ್ಕೃತವನ್ನ ಕಲಿಸಿ ಅದರಿಂದ ಉತ್ತಮ ಓದುವ ಕೌಶಲ್ಯ ಬೆಳೆಯುತ್ತದೆ. ಅದರಿಂದ ಉತ್ತಮ ಮೌಲ್ಯಗಳನ್ನ ಬೆಳೆಸುವ ಉತ್ತಮ ಶಿಕ್ಷಕರಾಗಿ ಉತ್ತಮ ಸಮಾಜ ನಿರ್ಮಾಣ ಮಾಡಿ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯೋಪಾಧ್ಯಾಯ ಕೆ.ಎಸ್.ತಿಪೇಶ್, ನಿವೃತ್ತ ಹಿರಿಯ ಶಿಕ್ಷಕರುಗಳಾದ ಚಂದ್ರಯ್ಯ, ಜಗದೀಶ್ವ ರಾಚಾರ್,ಶಂಕರಾನಂದ ಶ್ರೀಮತಿ ನಂದ,ಸರ್ಕಾರಿ ಪ್ರೌಢಶಾಲೆಯ ಆಂಗ್ಲಭಾಷಾ ಶಿಕ್ಷಕರು ಹಾಗೂ ಕಾರ್ಯಕ್ರಮದ ಆಯೋಜಕರಾದ ಚಂದ್ರಶೇಖರ್ ಸೇರಿದಂತೆ ರಾಜ್ಯದ ವಿವಿಧ ಕಡೆಗಳಿಂದ ಆಗಮಿಸಿದ್ದ ಶಿಕ್ಷಕರುಗಳು ಉಪಸ್ಥಿತರಿದ್ದರು ಕಾರ್ಯಕ್ರಮದ ಮುಖ್ಯ ಘಟ್ಟವಾಗಿದ್ದ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಒಬ್ಬರನ್ನೊಬ್ಬರು ಪರಿಚಯ ಮಾಡಿಕೊಂಡು ಖುಷಿ ಪಟ್ಟು ಸಂತೋಷ ಕೂಟದಲ್ಲಿ ಭಾಗಿಯಾಗಿದ್ದು ಒಂದು ವಿಶೇಷವಾಗಿತ್ತು, ಕಾರ್ಯಕ್ರಮಕ್ಕೂ ಮುನ್ನ ನಿಧನರಾಗಿದ್ದ ಹಿರಿಯ ಶಿಕ್ಷಕರುಗಳಿಗೆ ಒಂದು ನಿಮಿಷದ ಮೌನ ಆಚರಿಸಿ ಸಂತಾಪ ಸೂಚಿಸಲಾಯಿತು.

## ಫಾಸ್ಟ್ ನ್ಯೂಸ್

### ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆ.ವಿ. ಟಿ.ವಿ.ಪಿ ಎಲೆಬೇತೂರು ಶಾಖಾ ವ್ಯಾಪ್ತಿಯ ಕೇಂದ್ರ ದಿಂದ ಹೊರಡುವ ಎಫ್–1–ಚಿತ್ತಾನಹಳ್ಳಿ, ಎಫ್–3–ಕಕ್ಕರಗೊಳ್ಳ, ಎಫ್–4 ಅವರಗೊಳ್ಳ, ಎಫ್–5–ದೇವರಹಟ್ಟಿ ಎಫ್–14–ಯರಗುಂಟೆ, ಎಫ್–17–ಅಮೃತನಗರ ಮತ್ತು ಎಫ್–20–ಕೋಡಿಹಳ್ಳಿ ವಿದ್ಯುತ್ ಮಾರ್ಗಗಳ ವ್ಯಾಪ್ತಿಯಲ್ಲಿ ಎ.ಬಿ ಕೇಬಲ್ ಕಾಮಗಾರಿ ಮತ್ತು ಜಿ.ಓ.ಎಸ್ ಕಾಮಗಾರಿ ಹಮ್ಮಿಕೊಂಡಿರುವುದರಿಂದ. ಮೇ.25 ರಂದು ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ಯರಗುಂಟೆ, ಅಶೋಕನಗರ, ಕರೂರು, ದೊಡ್ಡಬೂದಿಹಾಳು, ಚಿಕ್ಕಬೂದಿಹಾಳು, ದೇವರಹಟ್ಟಿ, ಚಿತ್ತಾನಹಳ್ಳಿ, ಕಲ್ಪನಹಳ್ಳಿ, ಕಕ್ಕರಗೊಳ್ಳ, ಅವರಗೊಳ್ಳ ಮತ್ತು ಅಮ್ಮನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ. 66/11 ಕೆ.ವಿ ದಾವಣಗೆರೆ ವಿದ್ಯುತ್ ವಿತರಣಾಕೇಂದ್ರದಿಂದ ಹೊರಡುವ ಸಾಯಿ ಎಫ್.21 ಫೀಡರ್‌ನಲ್ಲಿ ನಗರದ ಮಹಾನಗರ ಪಾಲಿಕೆ ವತಿಯಿಂದ ಒಳಚರಂಡಿ ಕಾಮಗಾರಿ ಹಮ್ಮಿಕೊಂಡಿರುವುದರಿಂದ. ಮೇ.27 ರ ಬೆಳಿಗ್ಗೆ 10 ರಿಂದ ಸಂಜೆ 4.00 ಗಂಟೆಯವರೆಗೆ ಸಿದ್ದವೀರಪ್ಪ ಬಡಾವಣೆಯ 10, 11, ಮತ್ತು 12ನೇ ಕ್ರಾಸ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯವು 2024–25ನೇ ಸಾಲಿಗೆ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿವೇತನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದ್ದು. ಸ್ನಾತಕೋತ್ತರ ಪದವಿ, ಪಿಹೆಚ್‌ಡಿ, ಉನ್ನತ ವ್ಯಾಸಂಗಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ. ಅಭ್ಯರ್ಥಿಗಳು ಆಲ್‌ಲೈನ್ ಪೋರ್ಟಲ್‌ನಲ್ಲಿ https://overseas.tribal.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ.31 ರಂದು ಕೊನೆಯ ದಿನವಾಗಿರುತ್ತದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಪರಿಷತ್ ಚುನಾವಣೆ: ಸ್ಲಿಪ್ ವಿತರಣೆಗೆ ಸೂಚನೆ

» ದಾವಣಗೆರೆ

ರಾಜ್ಯ ವಿಧಾನ ಪರಿಷತ್ತಿನ ಸ್ಥಾನಗಳಿಗೆ ಜೂನ್ 3 ರಂದು ಚುನಾವಣೆ ನಡೆಯುತ್ತಿದ್ದು ಜಿಲ್ಲೆಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರ ಮತ್ತು ನೈರುತ್ತ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಚುನಾವಣೆ ನಡೆಯುತ್ತಿರುವುದರಿಂದ ಮತದಾರರಿಗೆ ಮತಚೀಟಿ ಹಾಗೂ ವೋಟರ್ ಗೈಡ್ ವಿತರಣೆ ಮಾಡುವಂತೆ ಜಿಲ್ಲಾಧಿಕಾರಿ ಹಾಗೂ ವಿಧಾನ ಪರಿಷತ್ ಸಹಾಯಕ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.



ಅವರು ಶುಕ್ರವಾರ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಸೂಚನೆ ನೀಡಿದರು. ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ದಾವಣಗೆರೆ, ಹರಿಹರ, ಜಗಳೂರು ತಾಲ್ಲೂಕುಗಳು ಮತ್ತು ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲ್ಲೂಕುಗಳು ಸೇರಲಿದ್ದು ಇಲ್ಲಿನ ಮತದಾರರಿಗೆ ವೋಟರ್ ಸ್ಲಿಪ್ ಹಾಗೂ ವೋಟರ್ ಗೈಡ್ ವಿತರಣೆ ಮಾಡಲು ಸೂಚನೆ ನೀಡಿದರು. ಮತಚೀಟಿ ವಿತರಣೆಗೆ ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ನೋಡಲ್ ಅಧಿಕಾರಿಗಳಾಗಿರುತ್ತಾರೆ ಎಂದರು.

ಮತಗಟ್ಟೆವಾರು ಮತದಾರರ ವಿವರ; ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಹರಿಹರದ ಸರ್ಕಾರಿ ಪ್ರೌಢಶಾಲೆ, ಗಾಂಧಿ ನಗರ ಇಲ್ಲಿ 461, ದಾವಣಗೆರೆಯ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಕೊಠಡಿ ಸಂಖ್ಯೆ.1 ರಲ್ಲಿ 707, ಇಲ್ಲಿನ ಎರಡನೇ ಮತಗಟ್ಟೆ ಕೊಠಡಿ ಸಂಖ್ಯೆ 2 ರಲ್ಲಿ 708, ಕೊಠಡಿ ಸಂಖ್ಯೆ 3 ರಲ್ಲಿ 708, ಕೊಠಡಿ 4 ರಲ್ಲಿ 708, ಕೊಠಡಿ ಸಂಖ್ಯೆ 5 ರಲ್ಲಿ 708 ಹಾಗೂ ಜಗಳೂರಿನ ತಾಲ್ಲೂಕು ಕಚೇರಿಯಲ್ಲಿ 351 ಮತದಾರರು ಸೇರಿ 4351 ಮತದಾರರಿದ್ದಾರೆ.

ನೈರುತ್ಯ ಶಿಕ್ಷಕರ ಕ್ಷೇತ್ರ; ನ್ಯಾಮತಿ ತಾಲ್ಲೂಕು ಕಚೇರಿ 79, ಹೊನ್ನಾಳಿ ತಾಲ್ಲೂಕು ಪಂಚಾಯತ್ ಸಾಮರ್ಥ್ಯಸೌಧ ಇಲ್ಲಿ 321, ಬಸವಾಪಟ್ಟಣ ಜನತಾ ಪ್ರೌಢಶಾಲೆ ಕೊಠಡಿ ಸಂಖ್ಯೆ 3 ರಲ್ಲಿ 246, ಚನ್ನಗಿರಿ ತಾಲ್ಲೂಕು ಪಂಚಾಯತ್ ಕೊಠಡಿ ಸಂಖ್ಯೆ 3 ರಲ್ಲಿ 322 ಮತದಾರರು ಸೇರಿ ಒಟ್ಟು 968.

ನೈರುತ್ಯ ಪದವೀಧರರ ಕ್ಷೇತ್ರ; ನ್ಯಾಮತಿ ತಾಲ್ಲೂಕು ಕಚೇರಿ ಕೊಠಡಿ ಸಂಖ್ಯೆ 2 ರಲ್ಲಿ 1012, ಹೊನ್ನಾಳಿ ತಾಲ್ಲೂಕು ಆಡಳಿತಸೌಧ ಕೊಠಡಿ 1 ರಲ್ಲಿ 751, ಇಲ್ಲಿನ ಕೊಠಡಿ 2 ರಲ್ಲಿ 729, ಕೊಠಡಿ 3 ರಲ್ಲಿ 724, ಬಸವಾಪಟ್ಟಣ ಜನತಾ ಪ್ರೌಢಶಾಲೆ ಪೂರ್ವ ವಿಭಾಗದ ಕೊಠಡಿ 1 ರಲ್ಲಿ 765, ಇಲ್ಲಿನ ಕೊಠಡಿ 2 ರಲ್ಲಿ 764, ಚನ್ನಗಿರಿ ತಾಲ್ಲೂಕು ಪಂಚಾಯಿತಿ ಕಟ್ಟಡದ ಪೂರ್ವ ವಿಭಾಗದ ಕೊಠಡಿ 1 ರಲ್ಲಿ 907 ಹಾಗೂ ಇಲ್ಲಿನ ಕೊಠಡಿ 2 ರಲ್ಲಿ 906 ಸೇರಿ 6558 ಮತದಾರರಿದ್ದಾರೆ.

# ಬಾಳು ಬೆಳಗಲು ಸಂಸ್ಕಾರ ಸಂಸ್ಕೃತಿ ಬೇಕು: ಶ್ರೀ ರಂಭಾಪುರಿ ಜಗದ್ಗುರುಗಳು

» ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು)



ಬಾಳಿನ ಉನ್ನತಿಗೆ ಧರ್ಮಾಚರಣೆ ಬೇಕು. ಮನುಷ್ಯನಾಗಿ ಬಾಳುವುದು ಸಂಸ್ಕೃತಿಯ ಲಕ್ಷಣ. ಬಾಳು ಬೆಳಗಲು ಸಂಸ್ಕಾರ ಮತ್ತು ಸಂಸ್ಕೃತಿ ಅವಶ್ಯಕವೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಶ್ರೇಷ್ಠ ಮತ್ತು ಕನಿಷ್ಠ ಆಗುವುದು ನಡವಳಿಕೆಯಿಂದಎಂಬುದನ್ನುಮರೆಯಬಾರದು. ಪ್ರಪಂಚದ ರೋಗಗಳಿಗೆಲ್ಲ ಔಷಧಿ ಇಲ್ಲದಿದ್ದರೂ ಮನದ ರೋಗಗಳಿಗೆಲ್ಲ ಔಷಧ ಇದ್ದೇ ಇದೆ. ಮನದ ರೋಗವೇ ಇತರ ರೋಗಗಳಿಗೆ ಮೂಲ. ಎಲ್ಲ ಕಾಲಕ್ಕೂ ಸತ್ಯ ಸತ್ಯವೇ. ಸುಳ್ಳು ಸುಳ್ಳೇ. ಸತ್ಯ ಕಾಣಲು ಸಮಯ ಶ್ರಮ ಬೇಕಾಗುತ್ತದೆ. ನಡೆಯುವ ದಾರಿಯಲ್ಲಿ ತಾಕತ್ತು ಇದ್ದರೆ ತಡೆಯುವ ಶಕ್ತಿ ಯಾರಿಗೂ ಇರುವುದಿಲ್ಲ. ಮೂರ್ಖನ ಹೃದಯ ಅವನ ನಾಲಿಗೆಯಲ್ಲಿ ಇರುತ್ತದೆ. ವಿವೇಕಿಯ ನಾಲಿಗೆ ಅವನ ಹೃದಯದಲ್ಲಿ ಇರುತ್ತದೆ. ಸಮಯ ಸಂದರ್ಭಗಳು ಯಾವಾಗಲೂ ಬದಲಾಗುತ್ತಿರುತ್ತವೆ. ಆದರೆ ಒಳ್ಳೆಯ ಸಂಬಂಧಗಳು ಹಾಗೂ ನಿಜವಾದ ಸ್ನೇಹಿತರು ಎಂದೂ ಬದಲಾಗುವುದಿಲ್ಲ. ಇತಿಹಾಸ ನಿನ್ನೆ ಸುಖವಿತ್ತೆಂದು ಹೇಳುತ್ತದೆ. ವಿಜ್ಞಾನ ನಾಳೆ ಸುಖವಿರುವುದೆಂದು ಹೇಳುತ್ತದೆ. ಆದರೆ ಧರ್ಮ ಹೇಳುತ್ತದೆ. ಸತ್ಯವಾದ ಮನಸ್ಸು ಹಾಗೂ ಸ್ವಚ್ಛವಾದ ಹೃದಯವಿದ್ದರೆ ನಿತ್ಯವೂ ಸುಖ ಇರುವುದೆಂದು ಭಾರತೀಯ ತತ್ವಜ್ಞಾನ ಹೇಳುತ್ತದೆ. ಬದುಕು ಅನ್ನುವುದು ನದಿಯ ಕೊನೆಯಿಲ್ಲದ ಪಯಣ. ಯಾವುದೂ ನಮ್ಮ ಜೊತೆ ಉಳಿಯುವುದಿಲ್ಲ. ಉಳಿಯುವುದು ಒಂದೇ ಹೃದಯಕ್ಕೆ ತಟ್ಟಿದ ನೆನಪೆಂಬುದನ್ನು ತಿಳಿಯಬೇಕು. ಉಜ್ವಲ ಜೀವನ ಉನ್ನತಿ ಮತ್ತು ಶ್ರೇಯಸ್ಸಿಗಾಗಿ ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ ವಿಚಾರ ಧಾರೆಗಳನ್ನು ಅನುಸರಿಸಿ ಬಾಳಿದರೆ ನೆಮ್ಮದಿ ಶಾಂತಿ ಪ್ರಾಪ್ತವಾಗುವುದೆಂದರು.

ಈ ಪವಿತ್ರ ಸಮಾರಂಭದಲ್ಲಿ ಮಳಲಿಮಠದ ಡಾ.ನಾಗಭೂಷಣ ಶಿವಾಚಾರ್ಯರು, ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯರು, ಹನುಮಾಪುರ ಹಿರೇಮಠದ ಡಾ.ಸೋಮಶೇಖರ ಶಿವಾಚಾರ್ಯರು, ಆಲೂರು ಹಿರೇಮಠದ ಶ್ರೀಗಳು, ವೀರೇಶ ಪಾಟೀಲ, ಮನು ಸಹೋದರರು ಭದ್ರಾವತಿ ಉಪಸ್ಥಿತರಿದ್ದರು.

## ಹಾಸ್ಟೆಲ್ ಜಾಗ ವಾಪಸ್ ಪಡೆದ ಆದಿ ಕರ್ನಾಟಕ ಜನಾಂಗದ ಮುಖಂಡರು



» ಚಿತ್ರದುರ್ಗ

ಆದಿ ಕರ್ನಾಟಕ ಜನಾಂಗದ ಮಕ್ಕಳ ಶಿಕ್ಷಣಕ್ಕಾಗಿ 1955 ರಲ್ಲಿ ಪುರಸಭೆ ನೀಡಿದ್ದ ಹಾಸ್ಟೆಲ್ ಜಾಗವನ್ನು ಕಸ್ತೂರಭಾ ವಿದ್ಯಾಭಿವೃದ್ಧಿ ಸಂಘ ಎಂದು ಬದಲಾವಣೆ ಮಾಡಿಕೊಂಡು ಕೆಲವು ಪ್ರಭಾವಿಗಳ ಕುಟುಂಬದ ಪಾಲಾಗಿದ್ದ ಜಾಗವನ್ನು ಮರಳಿ ಪಡೆಯಲಾಗಿದೆ ಎಂದು ಕರ್ನಾಟಕ ರಾಜ್ಯ ಮಾದಿಗರ ಸಾಂಸ್ಕೃತಿಕ ಸಂಘದ ರಾಜ್ಯ ಸಮಿತಿ ಮಹಾ ಪ್ರಧಾನ ಕಾರ್ಯದರ್ಶಿ ಹಿರೇಹಳ್ಳಿ ಮಲ್ಲಿಕಾರ್ಜುನ್ ತಿಳಿಸಿದರು.

ಒಕ್ಕಲಿಗರ ಹಾಸ್ಟೆಲ್ ಪಕ್ಕದಲ್ಲಿರುವ ಆದಿ ಕರ್ನಾಟಕ ಹಾಸ್ಟೆಲ್ ಜಾಗದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ದಾವಣಗೆರೆಯ ದುಗ್ಗಪ್ಪ ಕುಟುಂಬದವರು ಸುಳ್ಳು ದಾಖಲೆಗಳನ್ನು ನೀಡಿ 2010 ರಲ್ಲಿ ಈ ಜಾಗ ಕಬಳಿಸಿದ್ದರು. ನಂತರ ನಾವುಗಳು ಕಳೆದ ಡಿಸೆಂಬ□□ನಲ್ಲಿ ಇದನ್ನು ಕೈಗೆತ್ತಿಕೊಂಡು ಹೋರಾಟ ನಡೆಸಿದ ಫಲವಾಗಿ ಹಾಸ್ಟೆಲ್ ಜಾಗ ನಮ್ಮ ಕೈಸೇರಿದೆ. ದಾವಣಗೆರೆಯ ಡಾ. ಜಿ.ಡಿ.ರಾಘವನ್ ತನ್ನ ಹೆಸರಿಗೆ ಮಾಡಿಸಿಕೊಂಡಿದ್ದನ್ನು ಪತ್ತೆ ಹಚ್ಚಿದ್ದರಿಂದ ಮೂರು ದಿನದ ಹಿಂದೆ ನಗರಸಭೆ ಆದಿ ಕರ್ನಾಟಕ ಹಾಸ್ಟೆಲ್ ಎಂದು ವರ್ಗಾವಣೆ ಮಾಡಿಕೊಟ್ಟಿದೆ. ಮಾದಿಗ ಜನಾಂಗಕ್ಕೆ ಸೇರಿದ ಈ ಆಸ್ತಿ ಉಳಿಯಬೇಕಾದರೆ ಜನಾಂಗದ ಎಲ್ಲರೂ ಕೈಜೋಡಿಸಬೇಕೆಂದು ಹಿರೇಹಳ್ಳಿ ಮಲ್ಲಿಕಾರ್ಜುನ್ ವಿನಂತಿಸಿದರು.

ಕರ್ನಾಟಕ ರಾಜ್ಯ ಮಾದಿಗರ ಸಾಂಸ್ಕೃತಿಕ ಸಂಘದ ರಾಜ್ಯಾಧ್ಯಕ್ಷ ಸಿ.ಕೆ. ಮಹೇಶ್ ಮಾತನಾಡಿ ದೊಡ್ಡ ಜನಾಂಗ ಮಾದಿಗರಿಗೆ ಇದೊಂದು ದೊಡ್ಡ ರೀತಿಯ ವಂಚನೆಯಾಗಿತ್ತು. ನಮಗೆ ಗೊತ್ತಿಲ್ಲದೆ ಮರೆಮಾಚಿರುವುದು ಅತ್ಯಂತ ಖಂಡನೀಯ.



## ಫಾಸ್ಟ್ ನ್ಯೂಸ್

### ಸಾಗರೋತ್ತರ ವಿದ್ಯಾರ್ಥಿ ವೇತನಕ್ಕೆ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಭಾರತ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯವು 2024-25 ನೇ ಸಾಲಿನ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ರಾಷ್ಟ್ರೀಯ ಸಾಗರೋತ್ತರ ವಿದ್ಯಾರ್ಥಿ ವೇತನ ಯೋಜನೆಗೆ(ಓಔಖ) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ರಾಷ್ಟ್ರೀಯ ಸಾಗರೋತ್ತರ ಅರ್ಜಿಗಳನ್ನು ಸಲ್ಲಿಸಲು 20 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶವಿರುತ್ತದೆ. ಸಾಗರೋತ್ತರ ಪದವಿ, ಪಿ.ಹೆಚ್.ಡಿ ಉನ್ನತ ವ್ಯಾಸಾಂಗಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು https://overseas.tribal.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲೆಯಲ್ಲಿ 31810 ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನು: 13 ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರ ಸ್ಥಾಪನೆ

» **ಚಿತ್ರದುರ್ಗ**

2024-25 ನೇ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಜಿಲ್ಲೆಯಲ್ಲಿ ಒಟ್ಟು 31810 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದೆ. ಸೂಕ್ತ ವಿತರಣೆಗಾಗಿ ಹೋಬಳಿ ಮಟ್ಟದ 22 ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಕೇಂದ್ರಗಳನ್ನುಸ್ಥಾಪಿಸಲಾಗಿದೆ. ಇದರೊಂದಿಗೆ ಚಳ್ಳಕೆರೆ ತಾಲ್ಲೂಕಿನ ಸಾಣಿಕೆರೆ, ಪರಶುರಾಂಪುರ, ನಾಯಕನಹಟ್ಟಿ, ದೊಡ್ಡಉಳ್ಳಾರ್ತಿ, ದೇವರಡ್ಡಿಹಳ್ಳಿ, ತಳಕು ಹಾಗೂ ರೇಣುಕಾಪುರದ ಎಫ್‌ಪಿಓ, ಹಿರಿಯೂರು ತಾಲ್ಲೂಕಿನ ಯರಬಳ್ಳಿ, ಅಬ್ಬಿನಹೊಳೆ ಮತ್ತು ಧರ್ಮಪುರ ಹಾಗೂ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಮತ್ತು ತಾಲ್ಲೂಕಿನ ಒಂದು ಎಫ್‌ಪಿಓ ಮತ್ತು ಒಂದು ಕೆಓಎಫ್‌ನ ವಿತರಣಾ ಕೇಂದ್ರ ಸೇರಿದಂತೆ ಒಟ್ಟು 13 ಹೆಚ್ಚುವರಿ ಬಿತ್ತನೆ ಬೀಜ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದೆ. ಜಿಲ್ಲೆಯಲ್ಲಿ 32526 ಮೆ.ಟನ್‌ನಷ್ಟು ವಿವಿಧ ಗ್ರೇಡ್‌ನ ರಸಗೊಬ್ಬರ ದಾಸ್ತಾನಿದೆ. ರೀತಿಯ ರಸಗೊಬ್ಬರ ಮತ್ತು ಬಿತ್ತನೆ ಬೀಜದ ಕೊರತೆ ಇಲ್ಲ ರೈತರು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರು ಪಡೆಯಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಐಟಿಐ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಗಳೂರು ಇಲ್ಲಿ ಐಟಿಐ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಸಂಸ್ಥೆಯಿಂದ ಸಂಯೋಜನೆ ಪಡೆದ ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್,ಫಿಟ್ಟರ್, ಐ.ಟಿ &ಇ.ಎಸ್.ಎಂ, ಎಂ.ಎಂ.ವಿ, ಎಂ.ಆರ್ &ಎ.ಸಿ ಟರ್ನರ್, ಎಂ.ಇ.ವಿ ಅಡ್ವಾನ್ಸ್‌ಡ್ ಸಿ.ಎನ್.ಸಿ, ಮೆಕ್ಯಾನಿಕ್ ಡಿಸೇಲ್ ಮತ್ತು ಡ್ರೆಸ್ ಮೇಕಿಂಗ್ ವೃತ್ತಿ ಕೋರ್ಸ್‌ಗಳು ಇದ್ದು ಸರ್ಕಾರಿ ಐ.ಟಿ.ಐ, ಜಗಳೂರು ಅಥವಾ ಹತ್ತಿರದ ಸೈಬರ್ ಸೆಂಟರ್ ನಲ್ಲಿ cite karnataka.gov.in ವೆಬ್‌ಸೈಟ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಜಗಳೂರು ಇಲ್ಲಿ ಅಥವಾ ದೂ.ಸಂ: 08196-227110 ಗೆ ಸಂಪರ್ಕಿಸಲು ಪ್ರಾಂಶುಪಾಲರು ತಿಳಿಸಿದ್ದಾರೆ.

### ತೋಟಗಾರಿಕೆ ತರಬೇತಿ




» **ದಾವಣಗೆರೆ**

ತೋಟಗಾರಿಕೆ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ದಾವಣಗೆರೆ ಜಿಲ್ಲೆಯ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ಚಿತ್ರದುರ್ಗ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ಕ್ಷೇತ್ರದಲ್ಲಿ ಆಯೋಜಿಸಲಾಗಿದೆ. ತರಬೇತಿಯು 2024 ರ ಜುಲೈನಿಂದ 2025 ರ ಮಾರ್ಚ್‌ವರೆಗೆ ನಡೆಯಲಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಗಳನ್ನು ಮೇ.23 ರಿಂದ ಜೂನ್ 3 ರವರೆಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ದಾವಣಗೆರೆ ಇವರ ಕಚೇರಿಯ ಇಲಾಖಾ ವೆಬ್‌ಸೈಟ್ www.horticulture.kar.nic.in ನಲ್ಲಿ ಪಡೆದು. ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿತ ಶುಲ್ಕದೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು.



# ಭತ್ತ

## ಬೆಳೆಯುವ ರೈತ ಆತ್ಮಹತ್ಯೆಯತ್ತ, ಅಕ್ಕಿ ಮಾರುವ ವ್ಯಾಪಾರಿ ಅರಮನೆಯತ್ತಾ......



ವೈಕುಂಠ ಏಕಾದಶಿ ಮತ್ತು ರೈತರ ದಿನದ ಆಯ್ಕೆಯಲ್ಲಿ ಬಹುತೇಕ ಮಹಿಳೆಯರು ಮತ್ತು ಮಾಧ್ಯಮಗಳು ವೈಕುಂಠ ಏಕಾದಶಿಗೆ ಮಹತ್ವ ನೀಡಿದರು. ಆಹಾರ ಮತ್ತು ಭಕ್ತಿಯ ನಡುವೆ ಭಕ್ತಿಯೇ ಪ್ರಧಾನವಾಯಿತು....ಬೆವರಿನ ಮುಂದೆ ಸ್ನಾನವೇ ಶ್ರೇಷ್ಠವಾಯಿತು.........ನಾವೆಲ್ಲರೂ ನೆನಪಿಡಬೇಕಾದ - ಪ್ರೀತಿಯಿಂದ - ಹೃದಯದಾಳದಿಂದ ಕೃತಜ್ಞತೆ ಸಲ್ಲಿಸಬೇಕಾದ ಅತ್ಯಂತ ಮಹತ್ವದ ದಿನ..........

### ರಾಷ್ಟ್ರೀಯ ರೈತ ದಿನ

( ಕಿಸಾನ್ ದಿವಸ್ )
ಡಿಸೆಂಬರ್ 23...
ಮಾಜಿ ಪ್ರಧಾನಿ ದಿವಂಗತ ಚೌಧರಿ ಚರಣ್ ಸಿಂಗ್ ಅವರ ಜನ್ಮದಿನದ ಅಂಗವಾಗಿ.......

### ರೈತ ಹುತಾತ್ಮ ದಿನ

ಜೂನ್ 21..
( ಕರ್ನಾಟಕದಲ್ಲಿ ಮಾತ್ರ )
ನರಗುಂದ - ನವಲಗುಂದ ಹೋರಾಟದಲ್ಲಿ ಹುತಾತ್ಮರಾದ ರೈತರ ನೆನಪಿಗಾಗಿ...

### ಅನ್ನದಾತ
### ಅನಾಥನಾಗುವ ಮುನ್ನ.......

### ಅನ್ನಕ್ಕಾಗಿ
### ನಾವು ಪರದಾಡುವ ಮುನ್ನ......

ರೈತರಿಗೆ ಕೊಡಲು ನಮ್ಮ ಬಳಿ ಹಣವಿಲ್ಲ, ರೈತರ ಸಂಕಷ್ಟ ಪರಿಹರಿಸಲು ನಮ್ಮ ಬಳಿ ಅಧಿಕಾರವೂ ಇಲ್ಲ, ಸಣ್ಣ ಪುಟ್ಟ ಹೋರಾಟಗಳಿಗೆ ಕೈ ಜೋಡಿಸಿದರು ಉತ್ತಮ ಫಲಿತಾಂಶ ಕಾಣುತ್ತಿಲ್ಲ. ಏಕೆಂದರೆ ಪ್ರಾಮುಖ್ಯತೆ ಕೊಡಬೇಕಾದ ವಿಷಯಗಳನ್ನು ಮರೆಸಿ ಭಾವನಾತ್ಮಕ ಅಂಶಗಳನ್ನು ಮುನ್ನಲೆಗೆ ತಂದು ಇಡೀ ರೈತ ಸಮೂಹವನ್ನು ವಂಚಿಸಲಾಗುತ್ತಿದೆ. ಮನರಂಜನೆಗೆ ಸಾಕಷ್ಟು ಪ್ರೇಕ್ಷಕರಿದ್ದಾರೆ,

ರಾಜಕಾರಣಕ್ಕಾಗಿಸಾಕಷ್ಟುಹಿಂಬಾಲಕರಿದ್ದಾರೆ, ಧಾರ್ಮಿಕ ಕೆಲಸಗಳಿಗೆ ಸಾಕಷ್ಟು ಭಕ್ತರಿದ್ದಾರೆ,

ಆದರೆ ರೈತರ ಕಷ್ಟಗಳಿಗೆ ಧ್ವನಿಯಾಗಲು ಮಾತ್ರ ಕೆಲವೇ ಜನರಿದ್ದಾರೆ.

ಅದಕ್ಕೆ ಕಾರಣ ಜನರಿಗೆ ತಿನ್ನುವ ಅನ್ನ ಬೆಳೆಯುವ ಕೃಷಿ ಎಂಬುದು ಏನು ಎಂದೇ ಸರಿಯಾದ ತಿಳಿವಳಿಕೆ ಇಲ್ಲ.ದುಡಿದು ದುಡಿದು ಸವೆಯುತ್ತಿರುವ ರೈತರು......ತಿಂದು ತಿಂದು ಕೊಬ್ಬುತ್ತಿರುವ ಕೆಲವರು......ದುಡಿಯದೇ ತಿನ್ನುತ್ತಾ ಅನ್ನವೇ ವಿಷವಾಗಿ ಸಾಯುತ್ತಿರುವ ಹಲವರು...ಕೃಷಿ ಮತ್ತು ರೈತ ನಮ್ಮ ಕಣ್ಣ ಮುಂದೆಯೇ ಬಿಕ್ಕಳಿಸುವುದನ್ನು ನೋಡುವ ದೌರ್ಭಾಗ್ಯ ನಮ್ಮದು...

ಏಳಿ ಎದ್ದೇಳಿ ಎಚ್ಚರಗೊಳ್ಳಿ ,

ಅರ್ಥಮಾಡಿಕೊಳ್ಳಿ ನೀವು ದಡ್ಡರೆಂದು,

ಆಗ ನಿಮಗೆ ಅರಿವಾಗುತ್ತದೆ ನೀವು ಯಾರೆಂದು,ಆಗ ನಿಮ್ಮ ಶೋಷಣೆಯ ಕಾರಣಗಳು ಅರ್ಥವಾಗುತ್ತದೆ, ಬೆನ್ನು ಮೂಳೆಗೂ ಎಲುಬಿಲ್ಲದ ನಾಲಿಗೆಗೂ ಇರುವ ವ್ಯತ್ಯಾಸ,ಆಗ ತೋರಿಸಿ ಈ ದುರಹಂಕಾರಿಗಳಿಗೆ ಅನ್ನದ ಮಹತ್ವ,ಆಗ ನೋಡಿ ನಿಮ್ಮ ಕಾಲಿಗೆ ಬೀಳುತ್ತಾರೆ, ನೀವೇ ಅನ್ನದಾತರೆಂದು,ಆಮೇಲೆ ಪ್ರತಿದಿನವೂ ನಿಮ್ಮನ್ನೇ ನೆನಪಿಸಿಕೊಳ್ಳುತ್ತಾರೆ,

ಅಲ್ಲಿಯವರೆಗೂ ನಿಮ್ಮ ದಿನ ನಿಮ್ಮ ತ್ಯಾಗ ಯಾರಿಗೂ ನೆನಪಾಗುವುದಿಲ್ಲ.

ಇದನ್ನು ಸಾಧ್ಯವಾಗಿಸಬೇಕಾಗಿರುವುದು ಶೇಕಡ 70% ರಷ್ಟು ಇರುವ ರೈತರ ವಿದ್ಯಾವಂತ ಮಕ್ಕಳು. ಅವರುಗಳು ಜಾಗೃತರಾದರೆ ಯಾರೂ ತಡೆಯಲು ಸಾಧ್ಯವಿಲ್ಲ.

ರೈತರಾಗುವುದು ವರವೋ ? ಶಾಪವೋ ?

ಅನ್ನದಾತ - ದೇಶದ ಬೆನ್ನೆಲುಬು - ರೈತನೇ ದೇವರು ಈ ಭಾವನಾತ್ಮಕ ನಂಬಿಕೆಗಳನ್ನು ಸ್ವಲ್ಪ ಪಕ್ಕಕ್ಕೆ ಸರಿಸಿ ವಾಸ್ತವ ಪರಿಶೀಲಿಸೋಣ......
ಈ ಕ್ಷಣದಲ್ಲಿ
" ತಿನ್ನುವವರಿಗೆ ವರ,
ಬೆಳೆಯುವವರಿಗೆ ಶಾಪ "

ಮಂಗನಿಂದ ಮಾನವನಾದ ಕಾಲ ಮುಗಿದು ಕ್ರಮೇಣ ಮಾನವ ಮಂಗನಾಗುತ್ತಿರುವ ಈ ಸನ್ನಿವೇಶದಲ್ಲಿ ರೈತ ಮಾತ್ರ ಆಗಲೂ ಮಂಗನೇ ಈಗಲೂ ಮಂಗನೇ ಎಂದು ವಿಷಾದದಿಂದ, ದುಃಖದಿಂದ ಮತ್ತು ಆಕ್ರೋಶದಿಂದ ಹೇಳಬೇಕೆನಿಸುತ್ತದೆ.

ಎಲ್ಲಾ ಕ್ಷೇತ್ರಗಳು ಅಭಿವೃದ್ಧಿಯ ಪಥದಲ್ಲಿ ಸಾಕಷ್ಟು ಮುನ್ನಡೆಯುತ್ತಿರುವಾಗ ಶಿಕ್ಷಣ ಸಾಹಿತ್ಯ ಸಂಗೀತ ವಿಜ್ಞಾನ ಆರೋಗ್ಯ ಆಡಳಿತ ಸಾರಿಗೆ ಸಂಪರ್ಕ ದಿನದಿನಕ್ಕೂ ಹೊಸ ಹೊಸ ಆಯಾಮ ಪಡೆದುಕೊಳ್ಳುತ್ತಿರುವಾಗ ಭಾರತದ ಕೃಷಿ ಮಾತ್ರ ಎಲ್ಲೋ ಕೆಲವು ಸಣ್ಣ ಪುಟ್ಟ ಬದಲಾವಣೆ ಹೊರತುಪಡಿಸಿ ಮೂಲ ನಿಯಮಗಳು ಮಾತ್ರ ಇನ್ನೂ ಗತಕಾಲದ ಅಂಶಗಳನ್ನೇ ಅಳವಡಿಸಿಕೊಂಡಿದೆ.

ಭೂಮಿಯ ಉಪಯೋಗ, ಬಿತ್ತನೆ, ನೀರಾವರಿ, ಸಸ್ಯಗಳ ಬೆಳವಣಿಗೆ, ಕಟಾವು, ಸಂಗ್ರಹಣೆ, ಮಾರುಕಟ್ಟೆ,

ಬೆಲೆ ನಿಗದಿ, ಲಾಭ ಹಣದ ಉಪಯೋಗ, ನಷ್ಟದ ಪರಿಸ್ಥಿತಿಯ ನಿರ್ವಹಣೆ, ಕೌಟುಂಬಿಕ ನಿರ್ವಹಣೆ, ನಂಬಿಕೆಗಳು, ಅರಿವು ಮತ್ತು ಅವರ ಒಟ್ಟು ವ್ಯಕ್ತಿತ್ವ ಸಮಾಜದ ದೃಷ್ಟಿಯಲ್ಲಿ ಇನ್ನೂ ಹಾಸ್ಯಾಸ್ಪದವಾಗಿಯೇ ಇದೆ. ಅವರನ್ನು ಶೋಷಿಸಲು ಯಾವ ತಂತ್ರಗಳೂ ಬೇಡ. ಆತನ ವ್ಯಕ್ತಿತ್ವವೇ ಶೋಷಣೆಯನ್ನು ಸ್ವತಃ ತಾನೇ ಒಪ್ಪಿಕೊಳ್ಳುವ ಮನಸ್ಥಿತಿ ಹೊಂದಿದೆ.

ವ್ಯಕ್ತಿಮೂಲಭೂತವಾಗಿಪ್ರಜ್ಞಾವಂತನಾಗಿದ್ದರೆ ಆತ ಮಾಡುವ ಕೆಲಸಗಳು ಸಹ ಘನತೆಯಿಂದ ಕೂಡಿರುತ್ತದೆ. ವೈದ್ಯನೇ ಇರಬಹುದು, ಇಂಜಿನಿಯರೇ ಇರಬಹುದು, ಚಾಲಕ ಶಿಕ್ಷಕ ವಕೀಲ ರಾಜಕಾರಣಿ ವ್ಯಾಪಾರೋದ್ಯಮಿ ಯಾರೇ ಆಗಲಿ ಧೃಡ ಮನಸ್ಸಿನ ಅರಿವಿರುವ ವ್ಯಕ್ತಿತ್ವ ಅವನದಾಗಿದ್ದರೆ ಆತ ಯಾವುದೇ ವ್ಯವಸ್ಥೆಯಲ್ಲಿ ಕನಿಷ್ಠ ಉತ್ತಮ ಬದುಕನ್ನು ರೂಪಿಸಿಕೊಳ್ಳಬಹುದು.

ಆದರೆ ಮೂಲ ಸಾಮಾನ್ಯ ಜ್ಞಾನ ಇಲ್ಲದ ವ್ಯಕ್ತಿ ಯಾವುದೇ ಕೆಲಸ ಮಾಡಿದರೂ ಆತ ಸೋಲುವ ಸಂಕಷ್ಟಕ್ಕೆ ಗುರಿಯಾಗುವ ಸಾಧ್ಯತೆಯೇ ಹೆಚ್ಚು.

ವಾಸ್ತವವಾಗಿ ಭಾರತೀಯ ಬಹುತೇಕ ರೈತರು ಸಾಮಾನ್ಯ ಜ್ಞಾನದಿಂದ ವಂಚಿತರಾಗಿದ್ದಾರೆ. ಜಾಗತೀಕರಣದ ಸ್ಪರ್ಧಾತ್ಮಕ ಬದಲಾವಣೆಗಳನ್ನು ಗಮನಿಸಲೇ ಸಾಧ್ಯವಾಗದಂತ ಕತ್ತಲೆಯಲ್ಲಿ ಮುಳುಗುತ್ತಿದ್ದಾರೆ. ರಾಜಕಾರಣಿಗಳ, ಮಧ್ಯವರ್ತಿಗಳ, ವ್ಯಾಪಾರಿ ವಾಣಿಜ್ಯೋದ್ಯಮಿಗಳ ಬಲೆಯೊಳಗೆ ಬಹು ಸುಲಭವಾಗಿ ಸಿಕ್ಕಿಹಾಕಿಕೊಂಡಿದ್ದಾರೆ.

ಬಲಿಷ್ಠ ರಕ್ಷಣಾತ್ಮಕ ಆಡಳಿತ ವ್ಯವಸ್ಥೆ ಹೊಂದಿರುವ ಸರ್ಕಾರದ ವಿರುದ್ಧ ಇನ್ನೂ ಹಳೆಯ ಅಸ್ತ್ರಗಳಾದ ಪ್ರತಿಭಟನೆ, ಮುತ್ತಿಗೆ, ಉಪವಾಸ, ಸತ್ಯಾಗ್ರಹ ಎಂಬ ಮೊಂಡಾದ ಕತ್ತಿಯನ್ನು ಉಪಯೋಗಿಸುತ್ತಿದ್ದಾರೆ.

ಅತಿಯಾದ ಜನಸಂಖ್ಯೆಯ ಪರಿಣಾಮ ಮತ್ತು ಬಡತನ ಅಜ್ಞಾನದ ಕಾರಣದಿಂದ ಅನಿವಾರ್ಯವಾಗಿ ಒಡೆದು ಆಳುವ ರಾಜಕೀಯ ಪಕ್ಷಗಳ ಒತ್ತಡಕ್ಕೆ ಒಳಗಾಗುತ್ತಾರೆ ಮತ್ತು ಅತಿಯಾದ ಹಣದ ಹರಿವಿನಿಂದ ಹಾಗು ಹಣದ ಮಹತ್ವದಿಂದ ರೈತನೆಂಬುದು ಶಾಪವಾಗಿ ಮಾರ್ಪಟ್ಟಿದೆ.

ಇದು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ಎಂಬುದನ್ನು ಮರೆಯದಿರಿ. ಮತ ಎಂಬುದು ನಮ್ಮ ಮತಿಯ ( ಮನಸ್ಸಿನ ) ಅಸ್ತ್ರವಾದಾಗ.......

ಒಂದು ವೇಳೆ ಹೊಸ ನಾಯಕತ್ವದ ಹೊಸ ಚಿಂತನೆಯ ಹೊಸ ಗಾಳಿಯೊಂದು ಬಲವಾಗಿ ರೈತರ ಮನಸ್ಸಿನಲ್ಲಿ ಬೀಸಿ ಅವರನ್ನು ಪ್ರಬುದ್ದತೆಯೆಡಗೆ ಆಧುನಿಕತೆಯೆಡೆಗೆ,

ಸ್ವತಂತ್ರ ಚಿಂತನೆಯೆಡೆಗೆ ಮುನ್ನಡೆಸಿದರೆ.....

ವಿಧಾನಸೌದ - ಪಾರ್ಲಿಮೆಂಟು, ಅಧಿಕಾರಶಾಹಿ, ವ್ಯಾಪಾರಿಗಳು, ಮಧ್ಯವರ್ತಿಗಳು,

ವೃತ್ತಿನಿರತರು,

ಅಷ್ಟೇ ಏಕೆ,

ಇಡೀ ವ್ಯವಸ್ಥೆಯೇ ಬುಡಮೇಲಾಗಿ

" ರೈತನೇ ಅನ್ನದಾತ. ನಮ್ಮ ಬದುಕಿನ ಜೀವ ದ್ರವ್ಯ ರೈತನೇ "

ಎಂದು ಕೂಗಿ ಹೇಳುತ್ತಾ ಎಲ್ಲರೂ ಆತನ ಬಗ್ಗೆ ಘನತೆಯಿಂದ ನಡೆದುಕೊಳ್ಳುವ ದಿನಗಳು ಬರುತ್ತದೆ.

ಮುಖ್ಯವಾಗಿ ರೈತನನ್ನು ಹಾಸ್ಯಾಸ್ಪದವಾಗಿ ನೋಡುವ ಮನರಂಜನಾ ಉದ್ಯಮ, ರಾಜಕೀಯ ವ್ಯವಸ್ಥೆ, ವಾಣಿಜ್ಯೋಧ್ಯಮ, ಮಧ್ಯವರ್ತಿ ವೃತ್ತಿಯಲ್ಲಿರುವವರು ತಾವೇ ಹಾಸ್ಯಾಸ್ಪದವಾಗುತ್ತಾರೆ..

ಆ ಹೊಸ ನಾಯಕತ್ವ ಮತ್ತು ಚಿಂತನೆಯ ತಂಗಾಳಿಗಾಗಿ ಕಾಯುತ್ತಿರುವ..........

ಹಾಗಾಗಲಿ ಎಂದು ಆಶಿಸುತ್ತಾ ................

ನನ್ನ ಪ್ರೀತಿಯ ಗೆಳೆಯ ಗೆಳತಿಯರೇ......

ನಿಂಬೆ ಹಣ್ಣು ಮಾರುವ ಅಜ್ಜಿಯ ಬಳಿ ಚೌಕಾಸಿ ಮಾಡದಿರಿ.......

ಸೊಪ್ಪಿನ ಅಜ್ಜನ ಬಳಿ ಕೊಸರಾಡದಿರಿ.......

- **ಕಡಲೆಕಾಯಿ ಮಾರುವವರ ಹತ್ತಿರ ಜಗಳವಾಡದಿರಿ........**
- **ಹಣ್ಣಿನವನ ಹತ್ತಿರ ಪೌರುಷ ತೋರದಿರಿ.....**
- **ಎಳನೀರಿನವರ ಬಳಿ ಜುಗ್ಗುತನದಿಂದ ವರ್ತಿಸದಿರಿ........**
- **ಹೂವಿನವರ ಹತ್ತಿರ ನಿಮ್ಮೆಲ್ಲಾ ಜಿಪುಣತನ ಖರ್ಚುಮಾಡದಿರಿ.......**
- **ಗೊತ್ತೇ ನಿಮಗೆ ಹಣ್ಣು ತರಕಾರಿ ಸೊಪ್ಪು ಬೇಳೆಕಾಳುಗಳು ಭತ್ತ ಬೆಳೆಯುವವರ ಕಷ್ಟ,.....**
- **ಗೊತ್ತೇ ನಿಮಗೆ ಅವು ಬೆಳೆಯಲು ಎಷ್ಟು ದಿನ ಬೇಕೆಂದು......**
- **ಗೊತ್ತೇ ನಿಮಗೆ ಅದು ಫಸಲಾಗಲು ಎಷ್ಟು ಜನರು ಶ್ರಮಪಡಬೇಕೆಂದು.....**
- **ಗೊತ್ತೇ ನಿಮಗೆ ಅದಕ್ಕೆ ತಗಲುವ ಖರ್ಚು ಎಷ್ಟೆಂದು..........**
- **ಗೊತ್ತೇ ನಿಮಗೆ ಅದರ ಆರೈಕೆ ಎಷ್ಟು ಕಷ್ಟವೆಂದು.......**
- **ಗೊತ್ತೇ ನಿಮಗೆ ಅದರ ಕಟಾವಿನಲ್ಲಿ ಸುರಿಯುವ ಬೆವರು ಎಷ್ಟೆಂದು.......**
- **ಗೊತ್ತೇ ನಿಮಗೆ ಅದರ ಸಾಗಾಣಿಕೆಯ ಕರ್ಮಕಾಂಡ.........**
- **ಗೊತ್ತೇ ನಿಮಗೆ ಅದರಲ್ಲಿ ಆಗುವ ಸೋರಿಕೆಯ ನಷ್ಟ ಎಷ್ಟೆಂದು.......**
- **ಗೊತ್ತೇ ನಿಮಗೆ ಇಷ್ಟಾದರೂ ಅದಕ್ಕೆ ಸಿಗುವ ಪ್ರತಿಫಲ ಎಷ್ಟೆಂದು.....**
- **ನಿಮ್ಮ ಮನೆಯಲ್ಲಿ ಬೇಯುವ ಅನ್ನ ಕಂಪ್ಯೂಟರ್ ನಲ್ಲಿ ತಯಾರಾದದ್ದಲ್ಲ......**
- **ನೀವು ಊಟ ಮಾಡುವ ತರಕಾರಿ ಇಂಟರ್ನೆಟ್ ನಲ್ಲಿ ಬೆಳೆದದ್ದಲ್ಲ......**
- **ಅದು ರೈತರ ಬೆವರ ಹನಿಗಳಿಂದ ಬಸಿದದ್ದು...........**
- **ತಾಕತ್ತಿದ್ದರೆ** Pizza - Burger **ಹೋಟೆಲ್ ಗಳಲ್ಲಿ ಚೌಕಾಸಿ ಮಾಡಿ........**
- **ಧೈರ್ಯವಿದ್ದರೆ** Shopping mall **ಗಳಲ್ಲಿ ಕೊಸರಾಡಿ..........**
- **ಶಕ್ತಿಯಿದ್ದರೆ** Multiplex theater **ಟಿಕೆಟ್ ಕೌಂಟರ್ ನಲ್ಲಿ ಜಗಳವಾಡಿ........**
- **ಸದ್ಯಕ್ಕೆ ಸಾಮಾನ್ಯರಿಗೆ ಊಟಕ್ಕೇನು ಕೊರತೆ ಇಲ್ಲ,**
- **ರಾಜಕಾರಣಿಗಳಿಗೆ ಓಟು ಕೊಳ್ಳಲು ಸಮಸ್ಯೆ ಇಲ್ಲ,**
- **ಉದ್ಯಮಿಗಳಿಗೆ ವ್ಯಾಪಾರಕ್ಕೇನು ತೊಂದರೆ ಇಲ್ಲ,......**
- **ಡಾಕ್ಟರು, ಆಕ್ಟರು, ಮೇಷ್ಟರು, ಲಾಯರು, ಆಡಿಟರು, ಬ್ರೋಕರು, ಆಫೀಸರು ಯಾರಿಗೂ ತೊಂದರೆ ಏನೂ ಇಲ್ಲ....**

ನೋಡೋಣ ಮುಂದೆ..

ರೈತರೆಲ್ಲ ವಿಷ ಕುಡಿದು ಸತ್ತ ಮೇಲೆ, ಊಟಕ್ಕೆ ತೊಂದರೆಯಾದ ಮೇಲೆ ರೈತರನ್ನು ನೆನಪಿಸಿಕೊಳ್ಳೋಣ.......

ಅಲ್ಲಿಯವರೆಗೂ ಚೆನ್ನಾಗಿ ಊಟ ಮಾಡ್ಕೊಂಡು ಎಲ್ರೂ ಆರಾಮವಾಗಿರಿ.........

ಬೆಳಗಿನ ಬಿಸಿ ಬಿಸಿ ಕಾಫಿ ಟೀ,

ನಂತರದ ಉಪ್ಪಿಟ್ಟು ಚಿತ್ರಾನ್ನ ಇಡ್ಲಿ ವಡೆ ದೋಸೆ,

ಮಧ್ಯಾಹ್ನದ ರೊಟ್ಟಿ ಚಪಾತಿ ಮುದ್ದೆ ಅನ್ನ, ಸಂಜೆಯ ಪಾನಿಪುರಿ, ಮಸಾಲಾ ಪುರಿ, ಬೇಲ್ ಪುರಿ, ವಡಾ ಪಾವ್, ಪಾವ್ ಬಾಜಿ, ರಾತ್ರಿಯ ಚಿಕನ್ ಮಟನ್ ರೋಟಿ, ದಾಲ್ ಪಾಲಾಕ್, ದೋಕ್ಲಾ, ಕಿಚಡಿ ಎಲ್ಲಾ ದುಡ್ಡು ಕೊಟ್ಟರೆ ಸಿಗುತ್ತದೆ.

ಮನೆಗೇ ತಂದು ಕೊಡುತ್ತಾರೆ.

ಫಾದರ್ಸ್ ಡೇ, ಮದರ್ಸ್ ಡೇ, ಚಿಲ್ಡ್ರನ್ಸ್ ಡೇ, ವ್ಯಾಲೆಂಟೈನ್ ಡೇ, ಆ ಡೇ ಈ ಡೇ....ಎಲ್ಲಾ ಸಂಭ್ರಮದಿಂದ ಆಚರಿಸಿ.....

ನೋಡೋಣ ಗಾಡಿ ಹೀಗೆ ಎಷ್ಟು ದೂರ ಹೋಗುತ್ತೆ ಅಂತ..........

ರೈತರ ಬೆವರಿನ ಘಮಲು,
ಶ್ರಮದ ನಿಟ್ಟುಸಿರು,
ನಿರಾಸೆಯ ಆಕ್ರಂದನ,
ನೋವಿನ ಕೂಗು,
ಈ ಸಮಾಜಕ್ಕೆ ತಟ್ಟುವವರೆಗೂ......
ಮನುಷ್ಯ ಪ್ರಾಣಿಗಳ ಸುಖಕ್ಕೆ ತೊಂದರೆಯೇನು ಇಲ್ಲ......
ಆತ್ಮವಂಚಕರು
ನಾವು
ಆತ್ಮವಂಚಕರು...
ಕ್ಷಮಿಸಿ,
ಇದು ಯಾರ ವಿರುದ್ಧದ ದ್ವೇಷವೂ ಅಲ್ಲ,
ನಿಮ್ಮ ಮನಸ್ಸಿನ ಜಾಗೃತಿಗಾಗಿ,
ನಿಮ್ಮ ಗಮನ ಸೆಳೆಯಲು,
ರೈತರ ಶ್ರಮವನ್ನು ನಿಮಗೆ ನೆನಪಿಸಲು,
ಆಹಾರದ ಮಹತ್ವ ಸಾರಲು ಮಾತ್ರ......
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,

» **ಲೇಖನ**
**ವಿವೇಕಾನಂದ.**
**ಹೆಚ್.ಕೆ. 9844013068**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T